ಸಂಪಾದಕರು: ದರ್ಶನ್.ಟಿ
Editor : DARSHAN.T


# ನಮ್ಮ ಜನ
# NAMMA JANA

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 89 | ಆರ್‌ಎನ್‌ಐ ನಂ: ಕೆಎಆರ್‌ಕೆಎನ್/2023/88462 | ಚಿತ್ರದುರ್ಗ | ದಿನಾಂಕ: 22–10–2024 ಮಂಗಳವಾರ | ಪುಟ: 4 | ಬೆಲೆ : ರೂ.2–00
Volume - 02 Issue - 89 | RNI No: KARKAN/2023/88462 | Chitradurga | Date: 22-10-2024 Tuesday | Page: 4 | Price: Rs. 2-00

### ಶುಭಕೋರಿದ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್

# ಡಾ.ಜಿ.ವರುಣ ಜೊತೆ ಹೊಸ ಜೀವನಕ್ಕೆ ಕಾಲಿಟ್ಟ ಶಾಸಕ ರಘುಮೂರ್ತಿ ಪುತ್ರಿ ಡಾ.ಸುಚಿತ್ರ



ನಮ್ಮ ಜನ ವಿಶೇಷ




» ನಮ್ಮಜನ ವಿಶೇಷ


ಚಳ್ಳಕೆರೆ: ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ ಅವರ ಪುತ್ರಿ ಡಾ.ಟಿ.ಆರ್.ಸುಚಿತ್ರ, ಡಾ.ವರುಣ ಅವರ ವಿವಾಹ ಅದ್ದೂರಿಯಾಗಿ ನೇರವೇರಿತು.

ಶಾಸಕ ಟಿ.ರಘುಮೂರ್ತಿ ಮಗಳ ಮದುವೆಯ ಸಂಭ್ರಮದಲ್ಲಿದ್ದಾರೆ. ಚಳ್ಳಕೆರೆ ಹೆಚ್ ಪಿಪಿಸಿ ಮೈದಾನದಲ್ಲಿ ಶಾಸಕ ಟಿ.ರಘುಮೂರ್ತಿ ಪುತ್ರಿ ಡಾ.ಟಿ.ಆರ್.ಸುಚಿತ್ರ, ಡಾ.ಜಿ.ವರುಣ ಅವರ ಕೈ ಹಿಡಿದು ಹೊಸ ಜೀವನಕ್ಕೆ ಕಾಲಿಟ್ಟರು.

ಕಳೆದ ಎರಡು ದಿನಗಳಿಂದ ಚಳ್ಳಕೆರೆ ನಗರದಲ್ಲಿ ಬುಡಕಟ್ಟು ಜಾತ್ರೆಯಂತೆ ಕಂಡು ಬಂದಂತಹ ದೃಶ್ಯಗಳು ಮತ್ತು ಹೆಚ್ ಪಿಪಿಸಿ ಮೈದಾನದಲ್ಲಿ ಹಾಕಿದ್ದ ತಿರುಪತಿ ವೆಂಕಟೇಶನ ದೇವಸ್ಥಾನ ಮಾದರಿಯಲ್ಲಿ ನಿರ್ಮಾಣ ಮಾಡಿದ್ದ ಅದ್ದೂರಿ ಮದುವೆ ಸೆಟ್‌ನಲ್ಲಿ ಅತ್ಯಾಕರ್ಷಕ ಲೈಟಿಂಗ್ಸ್ ಹಾಗೂ ವಿಶೇಷ ವಿನ್ಯಾಸದ ಸೆಟ್ ಜನರ ಗಮನ ಸೆಳೆಯುತ್ತಿತ್ತು. ಹೆಚ್ ಪಿಪಿಸಿ ಮೈದಾನದ ಹಾಕಲಾಗಿದ್ದ ಬೃಹತ್ ಸೆಟ್‌ನಲ್ಲಿ ಈ ಮದುವೆ ನಡೆಯಿತು. ಮೂರು ಬಾರಿ ಶಾಸಕರಾಗಿ ಅಭಿವೃದ್ಧಿ ಹರಿಕಾರ, ಬಂಗಾರದ ಮನುಷ್ಯ, ಬರದ ನಾಡಿನ ಭಗೀರಥ ಎಂಬ ಖ್ಯಾತಿ ಜೊತೆಗೆ ಚಳ್ಳಕೆರೆಯಲ್ಲಿ ಅಭಿವೃದ್ಧಿ ಪರ್ವ ನಟಿಸಿದ ರಘುಮೂರ್ತಿ ಪುತ್ರಿ ವಿವಾಹಕ್ಕೆ



ಚಳ್ಳಕೆರೆ ವಿಧಾನ ಸಭಾ ಕ್ಷೇತ್ರ, ರಾಜ್ಯ ಮತ್ತು ಜಿಲ್ಲೆಯ ವಿವಿಧ ಭಾಗಗಳಿಂದ ಲಕ್ಷಾಂತರ ಜನರು ಆಗಮಿಸಿ ರಘುಮೂರ್ತಿ ಪುತ್ರಿ ಮನತುಂಬಿ ಹಾರೈಸಿದರು. ಚಳ್ಳಕೆರೆ ನಗರದಲ್ಲಿ ಸೋಮವಾರ ಎಲ್ಲಿ ನೋಡಿದರು ಸಹ ಸಹ ಜನವೋ ಜನ, ರಘುಮೂರ್ತಿ ಅವರು ನಿರೀಕ್ಷೆ ಮೀರಿ ಜನರು ಬಂದು ನವ ವಧು ವರರಿಗೆ ಆಶೀರ್ವಾದ ಮಾಡಿದರು. ಮುಹೂರ್ತ ಬೆಳಗ್ಗೆ 10–45 ರ ಸುಮಾರಿಗೆ ಜರಿಗಿತು. ಸಂಜೆ 4 ಗಂಟೆಯಾದರು ಮಂಟಪ್ಪದ ಕಡೆ ಜನ ಆಗಮಿಸುತ್ತಿದ್ದ ದೃಶ್ಯ ಕಂಡು ಬಂದವು.



## ನವ ದಂಪತಿಗೆ ಸಿಎಂ, ಡಿಸಿಎಂ ಶುಭ ಹಾರೈಕೆ

ಎಚ್‌ಪಿಪಿಸಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಕಾಲೇಜು ಡಿ.ಸುಧಾಕರ್ ಕ್ರೀಡಾಂಗಣದಲ್ಲಿ ನಡೆದ ಶಾಸಕ ಟಿ.ರಘುಮೂರ್ತಿ ಪುತ್ರಿ ಡಾ.ಟಿ.ಆರ್.ಸುಚಿತ್ರ, ಡಾ.ಆರ್. ವರಣ ದಂಪತಿಗಳನ್ನು ಮುಖ್ಯಮಂತ್ರಿ ಎಸ್.ಸಿದ್ದರಾಮಯ್ಯ ಮತ್ತು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಮನತುಂಬಿ ಆಶೀರ್ವದಿಸಿ, ಶುಭಕೋರಿದರು. ಶಾಸಕ ಟಿ.ರಘುಮೂರ್ತಿ, ಪತ್ನಿ ಗಾಯಿತ್ರಿ, ಸೇರಿ ಗಣ್ಯರು ಉಪಸ್ಥಿತರಿದ್ದರು.



## ಅಚ್ಚುಕಟ್ಟಾಗಿ ನಡೆದ ಊಟ, ಜನರಿಗೆ ಭರ್ಜರಿ ಊಟ

ಮದುವೆ ಬಂದಂತಹ ಜನರಿಗೆ ಅದ್ಭುತವಾದ ರುಚಿಕರವಾದ ಊಟ ನೀಡಿ ಸತ್ಕರಿಸಿದರು. ಹೋಳಿಗೆ, ಸಬ್ಬಕ್ಕಿ ಪಾಯಿಸಾ, ಜಹಾಂಗೀರ್, ನಾಲ್ಕು ರೀತಿ ಕೋಸಂಬರಿ, ಪಲ್ಯಗಳು, ಚಪಾತಿ, ಸಾಗು, ಗೀ ರೈಸ್, ಅನ್ನ ಸಾಂಬರ್, ಮೊಸರು, ಮಜ್ಜಗೆ, ಐಸ್ ಕ್ರೀಂ ಸೇರಿ ಇನ್ನೂ ಹಲವು ಬಗೆಯ ತಿನಿಸುಗಳನ್ನು ಜನರಿಗೆ ನೀಡಿ ಭರ್ಜರಿ ಊಟವನ್ನು ಅಚ್ಚುಕಟ್ಟಾಗಿ ಬಡಿಸಿ ಜನರನ್ನು ತೃಪ್ತಿಪಡಿಸಿದರು.


## ಪ್ರೀತಿಯಿಂದ ಜನರನ್ನು ಬರಮಾಡಿಕೊಂಡ ಅಳಿಯ ಮಗಳು

ಶಾಸಕ ಟಿ.ರಘುಮೂರ್ತಿ ಅಳಿಯ ಮಗಳು ಇಬ್ಬರು ಸಹ ಮದುವೆ ಸ್ಟೇಜ್ ಕಡೆ ಬರುವಂತಹ ಜನರು ಪರಿಚಯವಿಲ್ಲಸದಿದ್ದರೆ ನಗುತ್ತಲೇ ಬರ ಮಾಡಿಕೊಂಡು ಮಾತನಾಡಿಸಿ ಕೈ ಕುಲುಕುತ್ತಿದ್ದ ರಘುಮೂರ್ತಿ ಅಳಿಯ ಮಗಳನ್ನು ನೋಡಿ ಜನರು ಮತ್ತಷ್ಟು ಸಂತಸದಿಂದ ಊಟದ ಹಾಲ್ ಕಡೆ ಹೆಜ್ಜೆ ಹಾಕಿದರು.

# ದೇಶದ ಸರಾಸರಿ ಜಿಎಸ್‌ಡಿಪಿಗಿಂತ ಏರುಗತಿಯಲ್ಲಿ ಕರ್ನಾಟಕದ ಆರ್ಥಿಕ ಪ್ರಗತಿ

» ಬೆಂಗಳೂರು

ಕರ್ನಾಟಕ ರಾಜ್ಯ ಆರ್ಥಿಕ ಪ್ರಗತಿಯಲ್ಲಿ ದೇಶದಲ್ಲೇ ಉತ್ತಮ ಸಾಧನೆ ಮಾಡಿದ್ದು, 2023–24 ನೇ ಹಣಕಾಸು ಸಾಲಿನಲ್ಲಿ ಶೇ.10.2ರಷ್ಟು ಜಿಎಸ್‌ಡಿಪಿ ಪ್ರಗತಿ ಸಾಧಿಸಿದೆ. ಕೇಂದ್ರ ಸಾಂಖ್ಯಿಕ ಮತ್ತು ಯೋಜನಾ ಅನುಷ್ಠಾನ ಸಚಿವಾಲಯದ ಅಂಕಿ ಅಂಶಗಳ ಪ್ರಕಾರ ಈ ಅವಧಿಯಲ್ಲಿ ದೇಶದ ಸರಾಸರಿ ಜಿಎಸ್‌ಡಿಪಿ ಶೇ.8.2 ಆಗಿದೆ. ಕಳೆದ ಬಾರಿ ರಾಜ್ಯ ತೀವ್ರ ಬರಗಾಲಕ್ಕೆ ತುತ್ತಾಗಿದ್ದರೂ, ಜಾಗತಿಕವಾಗಿ ಐಟಿ ಮಾರುಕಟ್ಟೆ ಹಿನ್ನಡೆ ಅನುಭವಿಸಿದ್ದರೂ, ಕರ್ನಾಟಕ ಉತ್ತಮ ಆರ್ಥಿಕ ಪ್ರಗತಿ ಸಾಧಿಸಿದೆ.ನ್ಯಾಷನಲ್ ಸ್ಟಾಟಿಸ್ಟಿಕಲ್ ಎಸ್ಟಿಮೇಟ್ (ಎನ್‌ಎಸ್‌ಸಿ) ಆರಂಭದಲ್ಲಿ ಶೇ. 4ರಷ್ಟು ಕರ್ನಾಟಕದ ಜಿಎಸ್‌ಡಿಪಿ ಅಭಿವೃದ್ಧಿ ದರವನ್ನು ಅಂದಾಜಿಸಿತ್ತು.




ಆದರೆ ಹಣಕಾಸು ವರ್ಷದ ಅಂತ್ಯಕ್ಕೆ ರಾಜ್ಯದ ಅಭಿವೃದ್ಧಿ ದರ ಶೇ.13.1 ರಷ್ಟಾಗಿದ್ದು, ಎನ್‌ಎಸ್‌ಸಿ ಕರ್ನಾಟಕದ ಪ್ರಗತಿಯನ್ನು ತಪ್ಪಾಗಿ ಅಂದಾಜಿಸಿರುವುದು ಸ್ಪಷ್ಟವಾಗಿದೆ.ರಾಜ್ಯದಲ್ಲಿ ಬರಗಾಲ ಪರಿಸ್ಥಿತಿಯಿಂದಾಗಿ ಕೃಷಿ ವಲಯದ ಅಭಿವೃದ್ಧಿ ಉದ್ದೇಶಿತ ಪ್ರಮಾಣದಲ್ಲಿ ಸಾಧ್ಯವಾಗಿರುವುದಿಲ್ಲ. ಕರ್ನಾಟಕದ ಉಡಿಛಿ ಖಿಣಚಿಣಜಿ ಗಿಚಿಟಣಜ ಂಜಜಜ (ಜಿಎಸ್‌ವಿಎ) ಅಂದರೆ ಒಟ್ಟು ಆರ್ಥಿಕತೆಯಲ್ಲಿ ಐಟಿ ಮತ್ತು ಹಾರ್ಡ್‌ವೇರ್ ವಲಯದ ಪಾಲು ಶೇ.28ರಷ್ಟಿದ್ದು, ಜಾಗತಿಕ ಆರ್ಥಿಕ ಹಿಂಜರಿತದಿಂದಾಗಿ ಈ ವಲಯ ಜಾಗತಿಕವಾಗಿ ಹಿನ್ನಡೆ ಅನುಭವಿಸಿದೆ. ಭಾರತದ ಐಟಿ ವಲಯ 2022ರ ಹಣಕಾಸು ಸಾಲಿನಲ್ಲಿ ಶೇ.15.5 ರಷ್ಟು ಪ್ರಗತಿ ಕಂಡಿದ್ದು, 2023ರ ಅವಧಿಯಲ್ಲಿ ಶೇ.8ಕ್ಕೆ ಕುಸಿತ ಅನುಭವಿಸಿದೆ.

ಆದರೆ ಉತ್ತಮ ಆಡಳಿತ ಮತ್ತು ಬಹುವಲಯಗಳ ಅಭಿವೃದ್ಧಿಯಿಂದಾಗಿ ಕರ್ನಾಟಕ ರಾಜ್ಯದ ಆರ್ಥಿಕತೆ ಸ್ಥಿರವಾಗಿರುವುದು ಕಂಡು ಬಂದಿದೆ.2024–25ನೇ ಹಣಕಾಸು ಸಾಲಿಗೆ ಎನ್‌ಎಸ್‌ಸಿ ಕರ್ನಾಟಕ ರಾಜ್ಯಕ್ಕೆ ಶೇ.9.4 ಜಿಎಸ್‌ಡಿಪಿ ಪ್ರಗತಿಯನ್ನು ಅಂದಾಜಿಸಿದ್ದು, ಇದು ರಾಷ್ಟ್ರೀಯ ಸರಾಸರಿ ಶೇ.10.5ಕ್ಕಿಂತ ಸ್ವಲ್ಪ ಕಡಿಮೆಯಾಗಿದೆ. ಆದರೆ ಹಣಕಾಸು ಸಚಿವಾಲಯ ವಿವಿಧ ಆರ್ಥಿಕ ಚಟುವಟಿಕೆಗಳನ್ನು ಗಮನದಲ್ಲಿರಿಸಿ ಈ ಅವಧಿಯಲ್ಲಿ ಕರ್ನಾಟಕದ ಜಿಎಸ್‌ಡಿಪಿ ದರವನ್ನು ಶೇ.14ರಷ್ಟು ಅಂದಾಜಿಸಿದೆ. 2024ರ ಸೆಪ್ಟಂಬರ್ ಅವಧಿಯಲ್ಲಿ ಕರ್ನಾಟಕ ವರ್ಷದಿಂದ ವರ್ಷಕ್ಕೆ ಜಿಎಸ್‌ಟಿ ಸಂಗ್ರಹದಲ್ಲಿ ಶೇ.10ರಷ್ಟು ಹಾಗೂ ಮುದ್ರಾಂಕ ಶುಲ್ಕ ಸಂಗ್ರಹದಲ್ಲಿ ಶೇ.24ರಷ್ಟು ಹೆಚ್ಚಳ ದಾಖಲಿಸಿದ್ದು, ಉತ್ತಮ ಆರ್ಥಿಕತೆಯನ್ನು ತೋರಿಸುತ್ತಿದೆ.ಕರ್ನಾಟಕದ ತಲಾ ಜಿಎಸ್‌ಡಿಪಿ ದೇಶದಲ್ಲೇ ಅತ್ಯಧಿಕವಾಗಿದೆ. ಗ್ಯಾರಂಟಿ ಸೇರಿದಂತೆ ರಾಜ್ಯ ಸರ್ಕಾರದ ಹಲವು ಜನಪರ ಯೋಜನೆಗಳು ಅಭಿವೃದ್ಧಿಯ ಫಲ ಎಲ್ಲಾ ವರ್ಗಗಳಿಗೂ ತಲುಪುವುದನ್ನು ಖಾತ್ರಿಪಡಿಸಿವೆ. ಆರ್ಥಿಕ ಅಭಿವೃದ್ಧಿ ಮತ್ತು ಸಾಮಾಜಿಕ ಪ್ರಗತಿಯನ್ನು ಒಂದುಗೂಡಿಸುವ ಕರ್ನಾಟಕದ ಆರ್ಥಿಕ ಮಾದರಿಯ ಯಶಸ್ಸನ್ನು ಇದು ತೋರಿಸುತ್ತದೆ. ಐಟಿ ವಲಯದಲ್ಲಿ ಮುಂಚೂಣಿಯಲ್ಲಿರುವ ಕರ್ನಾಟಕ ಬಂಡವಾಳ ಹೂಡಿಕೆಯನ್ನು ಆಕರ್ಷಿಸುವ ಸಾಮರ್ಥ್ಯವನ್ನು ಹೊಂದಿರುವುದು ದೇಶದ ಡಿಜಿಟಲ್ ಮತ್ತು ಆರ್ಥಿಕ ರಂಗದಲ್ಲಿ ಪ್ರಮುಖ ಪಾತ್ರ ವಹಿಸಲು ಕಾರಣವಾಗಿದೆ ಎಂದು ಉದ್ಯಮ ರಂಗದ ತಜ್ಞರ ಅಭಿಪ್ರಾಯವಾಗಿದೆ.

## ಫಾಸ್ಟ್ ನ್ಯೂಸ್

### ಜಿಲ್ಲೆಯಾದ್ಯಂತ 48 ಮನೆಗಳು ಭಾಗಶಃ ಹಾನಿ

» **ಚಿತ್ರದುರ್ಗ**

ಭಾನುವಾರ ರಾತ್ರಿ ಸುರಿದ ಮಳೆ ವಿವರದನ್ವಯ ಚಿತ್ರದುರ್ಗ ಜಿಲ್ಲೆಯಲ್ಲಿ ಸರಾಸರಿ 14.3 ಮಿ.ಮೀ ಮಳೆಯಾಗಿದೆ. ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿನಲ್ಲಿ 7.5 ಮಿ.ಮೀ, ಚಿತ್ರದುರ್ಗ ತಾಲ್ಲೂಕಿನಲ್ಲಿ 18.5 ಹಿರಿಯೂರು ತಾಲ್ಲೂಕು 25.1 ಮಿ.ಮೀ, ಹೊಳಲ್ಕೆರೆ ತಾಲ್ಲೂಕು 13.9 ಮಿ.ಮೀ, ಹೊಸದುರ್ಗ ತಾಲ್ಲೂಕಿನಲ್ಲಿ 25.1 ಮಿ.ಮೀ ಹಾಗೂ ಮೊಳಕಾಲ್ಮುರು ತಾಲ್ಲೂಕಿನಲ್ಲಿ 4.2 ಮಿ.ಮೀ ಮಳೆಯಾಗಿದೆ.

**ಹೋಬಳಿವಾರು ಮಳೆ ವಿವರ:** ಚಳ್ಳಕೆರೆ ತಾಲ್ಲೂಕಿನ ಚಳ್ಳಕೆರೆಯಲ್ಲಿ 2 ಮಿ.ಮೀ, ನಾಯಕನಹಟ್ಟಿ 22.3 ಮಿ.ಮೀ, ಪರಶುರಾಂಪುರ 1.3 ಮಿ.ಮೀ, ತಳಕು 7.4 ಮಿ.ಮೀ ಮಳೆಯಾಗಿದೆ. ಚಿತ್ರದುರ್ಗ ತಾಲ್ಲೂಕಿನ ಚಿತ್ರದುರ್ಗದಲ್ಲಿ 11.5 ಮಿ.ಮೀ, ಭರಮಸಾಗರ 33.9 ಮಿ.ಮೀ, ಹಿರೇಗುಂಟನೂರು 15.5 ಮಿ.ಮೀ, ತುರುವನೂರು 16.4 ಮಿ.ಮೀ ಮಳೆಯಾಗಿದೆ. ಹಿರಿಯೂರು ತಾಲ್ಲೂಕಿನ ಹಿರಿಯೂರು 22.5 ಮಿ.ಮೀ, ಐಮಂಗಲ 8.3 ಮಿ.ಮೀ, ಧರ್ಮಪುರ 3.3 ಮಿ.ಮೀ, ಜವನಗೊಂಡನಹಳ್ಳಿ 3.6 ಮಿ.ಮೀ ಮಳೆಯಾಗಿದೆ. ಹೊಳಲ್ಕೆರೆ ತಾಲ್ಲೂಕಿನ ಹೊಳಲ್ಕೆರೆಯಲ್ಲಿ 31.1 ಮಿ.ಮೀ, ಬಿ.ದುರ್ಗ 32.6 ಮಿ.ಮೀ, ರಾಮಗಿರಿ 31.3 ಮಿ.ಮೀ, ತಾಳ್ಯ 10.8 ಮಿ.ಮೀ ಮಳೆಯಾಗಿದೆ. ಹೊಸದುರ್ಗ ತಾಲ್ಲೂಕಿನ ಹೊಸದುರ್ಗದಲ್ಲಿ 13.5 ಮಿ.ಮೀ, ಮಾಡದಕೆರೆ 15.9 ಮಿ.ಮೀ, ಮತ್ತೋಡು 16.2 ಮಿ.ಮೀ, ಶ್ರೀರಾಂಪುರ 10.2 ಮಿ.ಮೀ ಮಳೆಯಾಗಿದೆ. ಮೊಳಕಾಲ್ಮುರು ತಾಲ್ಲೂಕಿನ ಮೊಳಕಾಲ್ಮೂರಿನಲ್ಲಿ 29.9 ಮಿ.ಮೀ ಹಾಗೂ ದೇವಸಮುದ್ರದಲ್ಲಿ 19.8 ಮಿ.ಮೀ ಮಳೆಯಾಗಿದೆ.

**48 ಮನೆಗಳು ಭಾಗಶಃ ಹಾನಿ:** ಭಾನುವಾರ ರಾತ್ರಿ ಸುರಿದ ಮಳೆಗೆ ಜಿಲ್ಲೆಯಾದ್ಯಂತ 48 ಮನೆಗಳು ಭಾಗಶಃ ಹಾನಿಯಾಗಿದ್ದು, 18 ಮನೆಗಳಿಗೆ ನೀರು ನುಗ್ಗಿರುವ ಪ್ರಕರಣ, ಒಂದು ದೊಡ್ಡ ಜಾನುವಾರು ಹಾನಿ ಹಾಗೂ 2 ಹೆಕ್ಟೇರ್ ಕೃಷಿ ಬೆಳೆ ಹಾಗೂ 1 ಹೆಕ್ಟೇರ್ ತೋಟಗಾರಿಕೆ ಬೆಳೆ ಹಾನಿಯಾಗಿದೆ. ಚಿತ್ರದುರ್ಗ ತಾಲ್ಲೂಕಿನಲ್ಲಿ 6 ಮನೆಗಳು ಭಾಗಶಃ ಹಾನಿ, ಚಳ್ಳಕೆರೆ 10 ಮನೆಗಳು ಹಾಗೂ 1 ದೊಡ್ಡ ಜಾನುವಾರು ಹಾನಿ, 12 ಮನೆಗಳಿಗೆ ನೀರು ನುಗ್ಗಿರುವ ಪ್ರಕರಣ, 1 ಹೆಕ್ಟೇರ್ ತೋಟಗಾರಿಕೆ ಬೆಳೆ ಹಾಗೂ 2 ಹೆಕ್ಟೇರ್ ಕೃಷಿ ಬೆಳೆ ಹಾನಿಯಾಗಿದೆ. ಹೊಳಲ್ಕೆರೆ 18 ಮನೆಗಳು, ಹೊಸದುರ್ಗ 2 ಮನೆಗಳು ಭಾಗಶಃ ಹಾನಿ ಹಾಗೂ 1 ಮನೆಗೆ ನೀರು ನುಗ್ಗಿದೆ. ಹಿರಿಯೂರು ತಾಲ್ಲೂಕಿನಲ್ಲಿ 4 ಮನೆಗಳು ಭಾಗಶಃ ಹಾನಿ ಹಾಗೂ ಮೊಳಕಾಲ್ಮುರು ತಾಲ್ಲೂಕಿನಲ್ಲಿ 8 ಮನೆಗಳು ಭಾಗಶಃ ಹಾನಿ ಹಾಗೂ 5 ಮನೆಗಳಿಗೆ ನೀರು ನುಗ್ಗಿರುವ ಪ್ರಕರಣ ವರದಿಯಾಗಿದೆ ಎಂದು ಜಿಲ್ಲಾಧಿಕಾರಿಗಳ ಕಚೇರಿ ಪ್ರಕಟಣೆ ತಿಳಿಸಿದೆ.

### ಕಾಣೆ : ಪತ್ತೆಗೆ ಮನವಿ

» **ಚಿತ್ರದುರ್ಗ**

ಚಿತ್ರದುರ್ಗ ಜಿಲ್ಲೆಯ ಹೊಳಲ್ಕೆರೆ ತಾಲ್ಲೂಕಿನ ಚಿತ್ರಹಳ್ಳಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಮೂವರು ವ್ಯಕ್ತಿಗಳು ಕಾಣೆಯಾದ ಕುರಿತು ಮೂರು ಪ್ರತ್ಯೇಕ ಪ್ರಕರಣಗಳು ದಾಖಲಾಗಿವೆ. ಹೊಳಲ್ಕೆರೆ ತಾಲ್ಲೂಕಿನ ಮದ್ದೇರು ಗ್ರಾಮದ ನಿವಾಸಿ ವೇಣು ಪೃಥ್ವಿ ತಂದೆ ದ್ಯಾಮಪ್ಪ (ಸು.17 ವರ್ಷ) 2024ರ ಸೆ.23ರಂದು ಕಾಣೆಯಾದ ಕುರಿತು ಚಿತ್ರಹಳ್ಳಿ ಗೇಟ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕಾಣೆಯಾದ ವೇಣು ಪೃಥ್ವಿ 5.5 ಅಡಿ ಎತ್ತರ, ದುಂಡು ಮುಖ, ಗೋದಿ ಬಣ್ಣ, ಸಾಧಾರಣ ಮೈಕಟ್ಟು ಹೊಂದಿದ್ದು, ಕನ್ನಡ, ಇಂಗ್ಲಿಷ್, ಹಿಂದಿ, ತಮಿಳು ಮತ್ತು ತೆಲುಗು ಭಾಷೆ ಮಾತನಾಡುವರು. ಮನೆಯಿಂದ ಹೋಗುವಾಗ ಕಪ್ಪು ಬಣ್ಣದ ನೈಟ್ ಪ್ಯಾಂಟ್, ಕಪ್ಪು ಬಣ್ಣದ ಟೀ ಶರ್ಟ್ ಧರಿಸಿರುತ್ತಾರೆ. ಹೊಳಲ್ಕೆರೆ ತಾಲ್ಲೂಕಿನ ಕಣಿವೆ ಜೋಗಿಹಳ್ಳಿ ಗ್ರಾಮದ ಮೇಘಶ್ರೀ ತಂದೆ ಲಕ್ಷ್ಮಣ (ಸು.17ವರ್ಷ) ಎಂಬ ಯುವತಿ 2024ರ ಸೆ.30ರಂದು ಕಾಣೆಯಾದ ಕುರಿತು ಚಿತ್ರಹಳ್ಳಿ ಗೇಟ್ ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ. ಕಾಣೆಯಾದ ಮೇಘಶ್ರೀ ಸು.5 ಅಡಿ ಎತ್ತರ, ದುಂಡು ಮುಖ, ಎಣ್ಣೆಗೆಂಪು ಮೈಬಣ್ಣ, ಸಾಧಾರಣ ಮೈಕಟ್ಟು ಹೊಂದಿದ್ದು, ಕನ್ನಡ ಮಾತನಾಡುವರು. ಕುತ್ತಿಗೆಯ ಹಿಂಭಾಗದಲ್ಲಿ ಕಪ್ಪು ಮಚ್ಚೆ ಇರುತ್ತದೆ. ಮನೆಯಿಂದ ಹೋಗುವಾಗ ಗುಲಾಬಿ ಬಣ್ಣದ ಚೂಡಿದಾರ ಧರಿಸಿರುತ್ತಾರೆ. ಜಿಲ್ಲೆಯ ಹೊಳಲ್ಕೆರೆ ತಾಲ್ಲೂಕಿನ ಚಿತ್ರಹಳ್ಳಿ ಗ್ರಾಮದ ಸುಶ್ಮಿತ ಎಸ್ ತಂದೆ ಸತೀಶ (ಸು.15 ವರ್ಷ) ಯುವತಿ ಕಾಣೆಯಾದ ಕುರಿತು 2024ರ ಅ.12ರಂದು ಚಿತ್ರಹಳ್ಳಿ ಗೇಟ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕಾಣೆಯಾದ ಎಸ್. ಸುಶ್ಮಿತ ಸು. 4.5 ಅಡಿ ಎತ್ತರ, ದುಂಡು ಮುಖ, ಗೋಧಿ ಮೈಬಣ್ಣ, ಸಾಧಾರಣ ಮೈಕಟ್ಟು ಹೊಂದಿದ್ದು, ಕನ್ನಡ ಭಾಷೆ ಮಾತನಾಡುವರು. ಮನೆಯಿಂದ ಹೋಗುವಾಗ ನೀಲಿ ಬಣ್ಣದ ಟಾಪ್, ಗೋಲ್ಡ್ ಕಲರ್ ಪ್ಯಾಂಟ್ ಧರಿಸಿರುತ್ತಾರೆ. ಮೇಲ್ಕಂಡ ವ್ಯಕ್ತಿಗಳ ಕುರಿತು ಮಾಹಿತಿ ಕಂಡುಬಂದಲ್ಲಿ ಚಿತ್ರಹಳ್ಳಿ ಗೇಟ್ ಪೊಲೀಸ್ ಠಾಣೆಗೆ ಸಂಪರ್ಕಿಸುವಂತೆ ಸಹಾಯಕ ಪೊಲೀಸ್ ಉಪನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



**3 ನೇ ವರ್ಷದ ವಾಲ್ಮೀಕಿಜಯಂತ್ಯೋತ್ಸವದಲ್ಲಿ ಜಾನಪದಗಾಯಕ ಚಿನ್ನಸಮುದ್ರಉಮೇಶ್ ನಾಯ್ಕಅವರಿಗೆ ರಾಜ್ಯ ಮಟ್ಟದ ವಾಲ್ಮೀಕಿ ಪ್ರಶಸ್ತಿಯನ್ನು ಪದ್ಮಶ್ರೀ ಪ್ರಶಸ್ತಿ ಪುರಸ್ಕೃತೆ ಮಂಜಮ್ಮಜೋಗತಿಅವರು ಪ್ರದಾನ ಮಾಡಿದರು.**

### ಪೊಲೀಸ್ ಹುತಾತ್ಮರ ದಿನಾಚರಣೆಯಲ್ಲಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್

# ಪೊಲೀಸರ ತ್ಯಾಗ, ಬಲಿದಾನ ಸ್ಮರಣೀಯ





» **ಚಿತ್ರದುರ್ಗ**

ನಾಗರಿಕರು ನೆಮ್ಮದಿಂದ ಜೀವಿಸಲು ಪೊಲೀಸರು ತಮ್ಮ ಪ್ರಾಣವನ್ನು ಪಣಕಿಟ್ಟು ಕರ್ತವ್ಯ ನಿರ್ವಹಿಸುತ್ತಾರೆ. ಇಂತಹ ಪೊಲೀಸರ ತ್ಯಾಗ ಹಾಗೂ ಬಲಿದಾನ ಸದಾಕಾಲ ಸ್ಮರಣೀಯವಾಗಿದೆ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಹೇಳಿದರು.

ನಗರದ ಜಿಲ್ಲಾ ಸಶಸ್ತ್ರ ಮೀಸಲು ಪೊಲೀಸ್ ಪಡೆಯ ಆವರಣದಲ್ಲಿ ಸೋಮವಾರ ಜಿಲ್ಲಾ ಪೊಲೀಸ್ ಇಲಾಖೆಯಿಂದ ಆಯೋಜಿಸಲಾದ ಪೊಲೀಸ್ ಹುತಾತ್ಮರ ದಿನಾಚರಣೆಯ ಮುಖ್ಯ ಅತಿಥಿಗಳಾಗಿ ಭಾಗವಹಿಸಿ, ಹುತಾತ್ಮರ ಸ್ಮಾರಕಕ್ಕೆ ಗೌರವ ಸಲ್ಲಿಸಿ ಅವರು ಮಾತನಾಡಿದರು.

1959 ಅಕ್ಟೋಬರ್ 21 ರಂದು ಲಡಾಕ್‌ನ ಇಂಡೋ ಟಿಬೇಟಿಯನ್ ಗಡಿಯಲ್ಲಿ ಗಸ್ತು ತಿರುಗುತ್ತದ್ದ ಸಿಆರ್ ಪಿಎಫ್ ಪಡೆಯ ಮೇಲೆ ಚೈನಾ ಸೇನೆ ಆಕ್ರಮಣ ನಡೆಸಿತು. ಸಮುದ್ರ ಮಟ್ಟದಿಂದ ಸುಮಾರು 18 ಸಾವಿರ ಅಡಿ ಎತ್ತರದಲ್ಲಿ ಜರುಗಿದ ಈ ಯದ್ಧದಲ್ಲಿ, ತೀವ್ರ ಚಳಿ ಹಾಗೂ ಕಠಿಣ ಪರಿಸ್ಥಿತಿಯಲ್ಲಿ ಧೈರ್ಯದಿಂದ ಹೋರಾಟ ನಡೆಸಿದ ಸಿಆರ್ ಪಿಎಫ್ ಪಡೆಯ10 ಜನ ಪೊಲೀಸರು ಹುತಾತ್ಮರಾದರು.

ಇವರ ಸ್ಮರಣಾರ್ಥ ಪ್ರತಿ ವರ್ಷ ಹುತಾತ್ಮ ದಿನಾಚರಣೆ ಆಚರಿಸಲಾಗುತ್ತಿದೆ. ಇದುವರೆಗೂ ದೇಶದ್ಯಾಂತ 40 ಸಾವಿರಕ್ಕೂ ಹೆಚ್ಚು ಪೊಲೀಸರು ಹುತಾತ್ಮರಾಗಿದ್ದಾರೆ ಎಂದು ತಿಳಿಸಿದರು.

ಬೇಂದ್ರೆಯವರ ಕವನದ ಸಾಲುಗಳಂತೆ "ಎನ್ನ ಪಾಡೆನಗಿರಲಿ, ಅದರ ಹಾಡನ್ನಷ್ಟೆ ನೀಡುವೆನು ರಸಿಕ ನಿನಗೆ; ಕಲ್ಲುಸಕ್ಕರೆಯಂಥ ನಿನ್ನೆದೆಯು ಕರಗಿದರೆ ಆ ಸವಿಯ ಹಣಿಸು ನನಗೆ" ಎನುವಂತೆ ಎಂತಹದೇ ಸಂದರ್ಭದಲ್ಲಿ ಪೊಲೀಸರು ಅವರ ಎಲ್ಲಾ ಕಷ್ಟ ಕಾರ್ಪಣ್ಯಗಳನ್ನು ಮರೆತು ಜನರ ರಕ್ಷಣೆ ಮಾಡುತ್ತಾರೆ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಹೇಳಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು ಅವರು ದೇಶದಾದ್ಯಂತ ಹುತಾತ್ಮರಾದ 216 ಪೊಲೀಸ್ ಹಾಗೂ ಸಿಬ್ಬಂದಿಗಳ ಹೆಸರುಗಳನ್ನು ಈ ಸಂದರ್ಭದಲ್ಲಿ ವಾಚಿಸಿದರು. ಇದಕ್ಕೂ ಮುನ್ನ ಮುಖ್ಯ ಅತಿಥಿಗಳು ಸೇರಿದಂತೆ ಇತರೆ ಗಣ್ಯರು ಹುತಾತ್ಮರ ಸ್ಮಾರಕಕ್ಕೆ ಹೂ ಗೂಚ್ಛ ಇರಿಸಿ ಗೌರವ ಸಮರ್ಪಿಸಿದರು. ಹುತ್ಮಾತರ ಗೌರವಾರ್ಥ 3 ಸುತ್ತಿನ ವಾಲಿ ಫೈರಿಂಗ್ ಮಾಡುವುದರ ಜೊತೆಗೆ ಪೊಲೀಸ್ ವಾದ್ಯ ವೃಂದದಿಂದ ರಾಷ್ಟ್ರಗೀತೆ ನುಡಿಸಲಾಯಿತು. 2 ನಿಮಿಷಗಳ ಮೌನಾಚರಣೆ ಮಾಡಲಾಯಿತು.

2023ರ ಸೆಪ್ಟೆಂಬರ್ 01 ರಿಂದ 2024ರ ಆಗಸ್ಟ್ 30 ರವರೆಗೆ ದೇಶಾದ್ಯಂತ 216 ಪೊಲೀಸ್ ಅಧಿಕಾರಿ ಹಾಗೂ ಸಿಬ್ಬಂದಿ ಹುತಾತ್ಮರಾಗಿದ್ದಾರೆ. ಈ ಅವಧಿಯಲ್ಲಿ ಕರ್ನಾಟಕದ 5 ಪೊಲೀಸ್ ಸಿಬ್ಬಂದಿ ಕರ್ತವ್ಯದ ವೇಳೆ ಹುತಾತ್ಮರಾಗಿದ್ದಾರೆ. ಕಾರ್ಯಕ್ರಮದಲ್ಲಿ ಕರ್ತವ್ಯ ನಿರತ ಪೊಲೀಸ್ ಅಧಿಕಾರಿಗಳು, ನಿವೃತ್ತ ಪೊಲೀಸ್ ಸಿಬ್ಬಂದಿ ಸೇರಿದಂತೆ ಸಾರ್ವಜನಿಕರು ಉಪಸ್ಥಿತರಿದ್ದರು.










# ರಾಜ್ಯೋತ್ಸವ ಅದ್ದೂರಿಯಾಗಿ ಆಚರಿಸಲು ಸಹಕಾರ

» **ಹೊಳಲ್ಕೆರೆ**



ಕನ್ನಡ ರಾಜ್ಯೋತ್ಸವ ಅದ್ದೂರಿಯಾಗಿ ಆಚರಿಸಲು ಎಲ್ಲಾ ರೀತಿಯ ಸಹಕಾರ ನೀಡುತ್ತೇನೆ. ಜನ ಸೇರಿಸಿ ಯಶಸ್ವಿಗೊಳಿಸುವುದು ನಿಮ್ಮ ಜವಾಬ್ದಾರಿ ಎಂದು ಕನ್ನಡಪರ ಸಂಘಟನೆಗಳಿಗೆ ಶಾಸಕ ಡಾ.ಎಂ.ಚಂದ್ರಪ್ಪ ಕರೆ ನೀಡಿದರು.

ನ.1 ಕನ್ನಡ ರಾಜ್ಯೋತ್ಸವ ಹಾಗೂ 23 ರಂದು ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ ಆಚರಣೆ ಕುರಿತು ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಸೋಮವಾರ ನಡೆದ ಪೂರ್ವಭಾವಿ ಸಭೆ ಉದ್ದೇಶಿಸಿ ಮಾತನಾಡಿದರು.

ಯಾವುದೇ ಒಂದು ಕಾರ್ಯಕ್ರಮ ಯಶಸ್ವಿಯಾಗಬೇಕಾದರೆಜನಹೆಚ್ಚಿನಸಂಖ್ಯೆಯಲ್ಲಿ ಸೇರಬೇಕು. ಅಧಿಕಾರಿಗಳು ನಿಯಮದ ಪ್ರಕಾರ ರಾಜ್ಯೋತ್ಸವದಲ್ಲಿ ಭಾಗವಹಿಸುತ್ತಾರೆ. ಕನ್ನಡದ ಬಗ್ಗೆ ಆಸಕ್ತಿಯಿರುವ ಸಂಘಟನೆಗಳು ಜವಾಬ್ದಾರಿ ತೆಗೆದುಕೊಳ್ಳಬೇಕು. ಕನ್ನಡ ಭುವನೇಶ್ವರಿ ಹಾಗೂ ಕಲಾ ತಂಡಗಳ ಮೆರವಣಿಗೆ ಎಲ್ಲಿಂದ ಹೊರಟು ಎಲ್ಲಿಗೆ ತಲುಪಬೇಕು ಎನ್ನುವುದನ್ನು ನೀವುಗಳು ತೀರ್ಮಾನಿಸಬೇಕು. ಸರ್ಕಾರ ಮೂಲಸೌಕರ್ಯ ಒದಗಿಸುತ್ತದೆ. ಉಳಿದಂತೆ ನಿಮ್ಮ ಪಾತ್ರ ಮುಖ್ಯ ಎಂದು ಹೇಳಿದರು.

ಆಲೂರು ವೆಂಕಟರಾಯರು, ಮಾಜಿ ಮುಖ್ಯಮಂತ್ರಿ ಎಸ್.ನಿಜಲಿಂಗಪ್ಪನವರು ಕನ್ನಡದ ಏಕೀಕರಣಕ್ಕಾಗಿ ಹೋರಾಟ ಮಾಡಿ ಹರಿದು ಹಂಚಿ ಹೋಗಿದ್ದ ಕನ್ನಡನಾಡನ್ನು ಒಗ್ಗೂಡಿಸಿದರು. ಡಿ.ದೇವರಾಜ ಅರಸು ಮುಖ್ಯಮಂತ್ರಿಯಾಗಿದ್ದಾಗ ಮೈಸೂರನ್ನು ಕರ್ನಾಟಕವೆಂದು ನಾಮಕರಣ ಮಾಡಿದರು. ಹಾಗಾಗಿ ನಾಡ ಹಬ್ಬ ಕನ್ನಡ ರಾಜ್ಯೋತ್ಸವವನ್ನು ವಿಜೃಂಭಣೆಯಿಂದ ಆಚರಿಸಬೇಕು. ಅದೇ ರೀತಿ ನ.23 ರಂದು ನಡೆಯುವ ಕಿತ್ತೂರು ರಾಣಿ ಚೆನ್ನಮ್ಮ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಬೇಕು. ವೀರ ಮಹಿಳೆ ರಾಣಿ ಚೆನ್ನಮ್ಮನ ತ್ಯಾಗ, ಹೋರಾಟ ಯಾವ ಪುರುಷನಿಗಿಂತಲೂ ಕಮ್ಮಿಯಿರಲಿಲ್ಲ ಎಂದರು.

### ವಿದ್ಯುತ್ ಸ್ಪರ್ಶಿಸಿ ಇಬ್ಬರು ಸಾವು

**ಹಿರಿಯೂರು** : ಮಧ್ಯಪ್ರದೇಶ ಮೂಲದ ಇಬ್ಬರು ಮರ ಕಡಿಯಲು ತಡರಾತ್ರಿ ಯತ್ನಿಸಿದಾಗ ವಿದ್ಯುತ್ ಸ್ಪರ್ಶಿಸಿ ಸಾವನ್ನಪ್ಪಿದ ಘಟನೆ ತಾಲೂಕಿನ ಧರ್ಮಪುರದಲ್ಲಿ ನಡೆದಿದೆ. ಧರ್ಮಪುರದ ಕಣಜನಹಳ್ಳಿ ರಸ್ತೆಯ ಕೃಷ್ಣಾಪುರ ಜಯರಾಂ ಎಂಬುವವರ ಅಡಿಕೆ ತೋಟದಲ್ಲಿ ಈ ಘಟನೆ ಜರುಗಿದ್ದು ಮೃತರನ್ನು ಮಧ್ಯಪ್ರದೇಶ ಮೂಲದ ಮೋಹಿತ್ (22), ಅಕರ್ ಲಾಲ್ ( 32) ಎಂದು ಗುರುತಿಸಲಾಗಿದೆ. ಮೃತರು ರುದ್ರಾಕ್ಷಿ ತಯಾರಿಸುವವರು ಎನ್ನಲಾಗಿದ್ದು ಅವುಗಳನ್ನು ತಯಾರಿಸಲು ಯರಾಂ ಎಂಬುವವರ ಅಡಿಕೆ ತೋಟದಲ್ಲಿ ಮರ ಕಡಿಯಲು ಹೋದಾಗ ಮೋಟಾರ್ ಪಂಪ್ ಬಳಿ ವಿದ್ಯುತ್ ಸ್ಪರ್ಶಿಸಿ ಸ್ಥಳದಲ್ಲೇ ಮೃತಪಟ್ಟಿದ್ದಾರೆ.

ಮೃತರು ಧರ್ಮಪುರದ ಕಣಜನಹಳ್ಳಿ ರಸ್ತೆಯ ಸ್ವಾಭಿಮಾನ ಶಾಲೆ ಬಳಿ ಟೆಂಟ್ ಹಾಕಿಕೊಂಡು ವಾಸವಿದ್ದರು ಎನ್ನಲಾಗಿದೆ. ಮೃತರು ಮರಗಳ್ಳತನಕ್ಕೆ ಯತ್ನಿಸಿದ್ದರಾ ಎಂಬ ಶಂಕೆಯನ್ನು ಪೊಲೀಸರು ವ್ಯಕ್ತಪಡಿಸಿದ್ದಾರೆ. ಮೃತರ ದೇಹಗಳಿದ್ದ ಸ್ಥಳದಲ್ಲಿ ಕೊಡಲಿ ಹಾಗೂ ಗರಗಸ ಪತ್ತೆಯಾಗಿವೆ ಎನ್ನಲಾಗಿದೆ. ವಿಷಯ ತಿಳಿದ ತಕ್ಷಣ ಸ್ಥಳಕ್ಕೆ ಅಡಿಷನಲ್ ಎಸ್ ಪಿ ಕುಮಾರಸ್ವಾಮಿ, ಸಿಪಿಐ ಗುಡ್ಡಪ್ಪ,ಪಿಎ□□□ ಬಾಹುಬಲಿ ಪಡನಾಡ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಅಬ್ಬಿನಹೊಳೆ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ನಡೆದಿದ್ದು ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸುತ್ತಿದ್ದಾರೆ.

## ಪ್ರಮುಖ ಸುದ್ದಿ

# ಸದೃಢ, ಸಮಸ್ಥಿತಿ ಆರೋಗ್ಯ: ಇಂದು ಸವಾಲಿನ ಸಂಗತಿ

» **ಚಿತ್ರದುರ್ಗ**



ಸದೃಢ ಹಾಗೂ ಸಮಸ್ಥಿತಿಯ ಆರೋಗ್ಯಕ ಕಾಪಿಟ್ಟುಕೊಳ್ಳುವುದು ಇಂದು ಸವಾಲಿನ ಸಂಗತಿ.ಇದನ್ನರಿತು. ತಮ್ಮ ಜೀವನದ ಅರ್ಧ ಭಾಗವನ್ನು ಈ ಭಾಗದ ಸಾರ್ವಜನಿಕರಿಗಾಗಿ ಯೋಗವನ್ನು ಪರಿಚಯಿಸಿ ,ಅದನ್ನ ತಮ್ಮ ಜೀವನದ ಅವಿಭಾಜ್ಯ ಅಂಗವಾಗಿ ಪರಿಗಣಿಸಿದರೆ ರೋಗಗಳು ದೇಹಕ್ಕೆ ಅಷ್ಟು ಸುಲಭವಾಗಿ ಅಂಟುವುದಿಲ್ಲ ಎನ್ನುವುದನ್ನ ಮನವರಿಕೆ ಮಾಡುತ್ತಾ ಬಂದಿರುವ ಯೋಗಾಚಾರ್ಯ ಎಲ್.ಎಸ್. ಚಿನ್ಮಯಾಂದ ಅವರ ಕೊಡುಗೆ ಅನನ್ಯವಾದದು ಎಂದು ಶಾರದಾ ಬ್ರಾಸ್ ಬ್ಯಾಂಡ್ ನ ಸಂಸ್ಥಾಪಕರು, ಬಸವೇಶ್ವರ ಪುನರ್ಜೋತಿ' ಐ' ಬ್ಯಾಂಕ್ ನ ನಿರ್ದೇಶಕರು ,ಹತ್ತಾರು ಸಂಘ-ಸಂಸ್ಥೆಗಳಲ್ಲಿ ಪದಾಧಿಕಾರಿಯಾಗಿ ಸೇವೆ ಸಲ್ಲಿಸುತ್ತಿರುವ ಎಸ್.ವಿ .ಗುರುಮೂರ್ತಿ ಅವರು ಸದಭಿಪ್ರಾಯ ವ್ಯಕ್ತಪಡಿಸಿದರು.

ಅವರು ಇಂದು ಮುಂಜಾನೆ ನಗರದ ರೋಟರಿ ಬಾಲ ಭವನದಲ್ಲಿ ಕಳೆದ ಎರಡೂವರೆ ಮೂರು ದಶಕಗಳಿಂದ ಯೋಗಭ್ಯಾಸ ಮಾಡಿಸುತ್ತಾ ಅದರೊಂದಿಗೆ ಸಾಮಾಜಿಕ ಕೆಲಸಗಳನ್ನು ಹಮ್ಮಿಕೊಂಡು ಜಿಲ್ಲೆಯಲ್ಲಿ ಹೆಸರುವಾಸಿಯಾಗಿರುವ ಯೋಗಾಚಾರ್ಯ ಚಿನ್ಮಯಾನಂದ ಅವರ ಅರವತ್ತನೆ ವರ್ಷದ ಜನ್ಮದಿನ ಸಮಾರಂಭದ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದ ಅವರು ಮಲ್ಲಾಡಿಹಳ್ಳಿ ರಾಘವೇಂದ್ರ ಸ್ವಾಮಿಗಳ ತರುವಾಯ ಯೋಗಾಸನ ಕ್ಷೇತ್ರದಲ್ಲಿ ಮತ್ತೆ ಆ ಹೆಸರನ್ನ ಉಳಿಸುವ ನಿಟ್ಟಿನಲ್ಲಿ ಚಿನ್ಮಯಾನಂದ ಅವರು ಶ್ರೀಗಳವರ ಶಿಷ್ಯರಾಗಿ ಕೆಲಸ ಮಾಡುತ್ತಿರುವುದು ಅಭಿನಂದನಾರ್ಹ... ಅದರೊಂದಿಗೆ ಸಮಾಜಕ್ಕೆ ಅಗತ್ಯ ಎನಿಸುವ ಕೆಲಸಗಳನ್ನು ಮಾಡುತ್ತಾ ಬಂದಿದ್ದಾರೆ. ಹಾಗೆಯೇ ಇಂದು ಜೋಗಿಮಟ್ಟಿ ರಸ್ತೆಯ ಹಿಂದೂ ರುದ್ರಭೂಮಿಯಲ್ಲಿ ಸಸಿ ನೆಡುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಅದು ಅವರಿಗೆ ಇಷ್ಟವಾದ ಕೆಲಸವೂ ಹೌದು ಎಂದು ಆಶಿಸಿದರು.

ಮತ್ತೋರ್ವ ಅತಿಥಿ ರೋಟೇರಿಯನ್ ಟಿ. ವೀರಭದ್ರಸ್ವಾಮಿ ಅವರು ಮಾತನಾಡಿ ಶಿಸ್ತು, ಸಮಯಪಾಲನೆ ಮತ್ತು ಬದ್ಧತೆಗೆ ಮತ್ತೊಂದು ಹೆಸರು ಚಿನ್ಮಯಾನಂದ ಅವರು.ನಾವು ಅವರಿಂದ ಕಲಿಯುವುದು ಬಹಳವೇ ಇದೆ. ನಮ್ಮ ಆರೋಗ್ಯ ಸದೃಢವಾಗಿರಿಸಿಕೊಳ್ಳಲು ಯೋಗ ತರಬೇತಿ ಅವರಿಂದ ಪಡೆಯುವ ಮೂಲಕ ಅವರನ್ನ ಸದ್ಬಳಕೆ ಮಾಡಿಕೊಳ್ಳುವ ಪ್ರಯತ್ನ ಮಾಡೋಣ ಎಂ ದರು.ಇನ್ನೋರ್ವ ಅತಿಥಿಗಳಾಗಿದ್ದ ನಿವೃತ್ತ ಮುಖ್ಯ ಶಿಕ್ಷಕರಾದ ಹುರುಳಿ ಎಂ. ಬಸವರಾಜ್ ಮಾತನಾಡಿ ತಾಯಿ ತಂದೆ ಹೊರತುಪಡಿಸಿದರೆ ನಂತರದ್ದು ಗುರುವಿನ ಸ್ಥಾನ.ಅವರು ನಮ್ಮ ಬದುಕಿನಲ್ಲಿ ಶ್ರೇಷ್ಠ ಜವಾಬ್ದಾರಿಯನ್ನು ಅವರು ನಿರ್ವಹಿಸುತ್ತಿರೆ.ಚಿನ್ಮಯಾನಂದ ಅವರು ಯೋಗದ ಬಗ್ಗೆ ಪ್ರಾಮಾಣಿಕವಾಗಿ ಜನರಿಗೆ ತಿಳಿಸುತ್ತಾ, ಜನ ಆರೋಗ್ಯದಿಂದ ಇರುವ ಬಗ್ಗೆ ಅವರು ಸೇವೆ ಸಲ್ಲಿಸುತ್ತಿದ್ದಾರೆ. ಹಾಗೆಯೇ ಸರಳ, ಸದುವಿನಯದೊಂದಿಗೆ ತಮ್ಮ ಹೆಸರಿಗೆ ತಕ್ಕಂತೆ ಯೋಗದ ಮೂಲಕ ಆನಂದವನ್ನು ಹಂಚುವ ಕೆಲಸ ಮಾಡುತ್ತಿದ್ದಾರೆ ಚಿನ್ಮಯಾಂದ ಅವರು. ಅವರನ್ನು ನಾವು ಅನುಸರಿಸುವುದು ಬಹಳವೇ ಇದೆ ಎಂದು ಅಭಿಪ್ರಾಯ ಪಟ್ಟರು.

ಯೋಗಾಭ್ಯಾಸಿಗಳಾದ ಮಮತಾ ಮಾತನಾಡಿ ಯೋಗ ತರಗತಿಗಳಲ್ಲಿ ಲಿಂಗ ತಾರತಮ್ಯ ಎಣಿಸದೆ, ನಮ್ಮ ಬೆನ್ನು ತಟ್ಟಿ ಕಠಿಣ ಅಭ್ಯಾಸಗಳನ್ನು ತಿದ್ದುತ್ತಾ, ಸುಲಲಿತ ರೀತಿಯಲ್ಲಿ ಮಾಡಿಸುತ್ತಾ ಪ್ರೇರೇಪಿಸುತ್ತಾರೆ .ಅಂತಹವರು ನಮ್ಮೊಂದಿಗೆ ಇರುವುದೇ ಒಂದು ಸಂತಸದ ಸಂಗತಿ ಎಂದರು. ಮತ್ತೋರ್ವ ಅಭ್ಯಾಸಿಗಳಾದ ರೀನಾ ವೀರಭದ್ರಪ್ಪ ಮಾತನಾಡಿ ಯಾವುದೇ ಪ್ರತಿ ಫಲಾಪೇಕ್ಷೆ, ನಿರೀಕ್ಷೆ ಇಲ್ಲದೆ ಯೋಗವನ್ನು ಮಾರಾಟದ ಸರಕನ್ನಾಗಿಸದೆ ಅತ್ಯಂತ ಕಡಿಮೆ ದರವನ್ನು ಪಡೆದು ಯೋಗವನ್ನು ಕಲಿಸುವ, ಆ ಮೂಲಕ ಸದೃಢ ದೇಹ ಮತ್ತು ಮನವನ್ನು ಹೊಂದೋಣ ಎನ್ನುವ ಅವರ ಸಹೃದಯ ನಮಗೆ ಆನಂದ ತಂದಿದೆ. ಹಾಗೆಯೇ ಸಮಾಜದ ಹಿತಕ್ಕಾಗಿ ಶ್ರಮಿಸುತ್ತಿದ್ದಾರೆ ಎಂದು ನುಡಿದರು.

ಈ ಸಂದರ್ಭದಲ್ಲಿ ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು, ನಗರದ ವಿವಿಧ ಬಡಾವಣೆಗಳ ಯೋಗಾಸನ ತರಬೇತಿದಾರರುಭಾಗವಹಿಸಿಶ್ರೀಯುತರಿಗೆ ಅಭಿನಂದನೆ ಸಲ್ಲಿಸಿ ,ಶುಭ ಹಾರೈಸಿದರು. ಕೋಕಿಲ ಎಂ .ಜೆ ಅವರು ಎಲ್ಲೋ ಹುಡುಕಿದೆ ಇಲ್ಲದ ದೇವರ ಎಂಬ ಕವನ ಗಾಯನೊಂದಿಗೆ ಪುಟ್ಟ, ಅರ್ಥಪೂರ್ಣ ಸಮಾರಂಭ ಆರಂಭವಾಯಿತು. ಯೋಗಾಭ್ಯಾಸಿ ಹಾಗೂ ಶಿಕ್ಷಕರು ಆಗಿರುವ ವಿಮಲಾ ಅವರು ಸ್ವಾಗತಿಸಿ ಕಾರ್ಯಕ್ರಮ ನಿರ್ವಹಿಸಿದರು.

ಇದಾದ ನಂತರ ನಗರದ ಜೋಗಿಮಟ್ಟಿ ರಸ್ತೆಯ ಪಕ್ಕದಲ್ಲಿರುವ ಹಿಂದೂ ರುದ್ರಭೂಮಿಯಲ್ಲಿ ವಿವಿಧ ತಳಿಯ ಸಸಿಗಳನ್ನು ನೆಡಲಾಯಿತು.ಈ ಸಂದರ್ಭದಲ್ಲಿ ಅಲ್ಲಿಯೂ ಸಹ ಜನಪರ ಕಾಳಜಿಯ ಅನೇಕರು ಹಾಗೂ ಚಿನ್ಮಯಾನಂದರ ಅಭಿಮಾನಿಗಳು ಭಾಗವಹಿಸಿ ಸಮಾರಂಭವನ್ನು ಯಶಸ್ವಿಗೊಳಿಸಿದರು.

ಶ್ರೀಯುತ ಚಿನ್ಮಯಾಂದ ಅವರು ಕಳೆದ ಅಕ್ಟೋಬರ್ 6 ರಿಂದ 20ನೇ ತಾರೀಕಿನವರೆಗೂ ಅಂದರೆ ನಿನ್ನೆಯವರೆವಿಗೂ ತಮ್ಮ ಮನೆಯ ಮಹಡಿಯ ಮೇಲೆ ಸುಮಾರು 20ರಿಂದ 30 ಜನರಿಗೆ ವಿವಿಧ ವಸ್ತುಗಳನ್ನು ಬಳಸಿ ಯೋಗಾಸನ ಮಾಡುವ ಯೋಗಾಭ್ಯಾಸವನ್ನ ಉಚಿತವಾಗಿ ಮಾಡಿಸಿದ್ದನ್ನು ಸ್ಮರಿಸಬಹುದಾಗಿದೆ.

## ಫಾಸ್ಟ್ ನ್ಯೂಸ್

### ಅ.23ರಂದು ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ

» **ಚಿತ್ರದುರ್ಗ**

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ವತಿಯಿಂದ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇದೇ ಅ.23ರಂದು ಬೆಳಿಗ್ಗೆ 11ಕ್ಕೆ "ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ" ಆಚರಣೆ ಸಮಾರಂಭ ಆಯೋಜಿಸಲಾಗಿದೆ. ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಉದ್ಘಾಟಿಸುವರು. ಶಾಸಕ ಕೆ.ಸಿ.ವೀರೇಂದ್ರ (ಪಪ್ಪಿ) ಅಧ್ಯಕ್ಷತೆ ವಹಿಸುವರು. ಗೌರವಾನ್ವಿತ ಅತಿಥಿಗಳಾಗಿ ಸಂಸದ ಗೋವಿಂದ ಎಂ ಕಾರಜೋಳ, ಆಹಾರ ಮತ್ತು ನಾಗರೀಕ ಸರಬರಾಜು ನಿಗಮದ ಅಧ್ಯಕ್ಷರು ಹಾಗೂ ಹೊಸದುರ್ಗ ಶಾಸಕ ಬಿ.ಜಿ.ಗೋವಿಂದಪ್ಪ, ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ, ಮೊಳಕಾಲ್ಮೂರು ಶಾಸಕ ಎನ್. ವೈ.ಗೋಪಾಲಕೃಷ್ಣ, ಹೊಳಲ್ಕೆರೆ ಶಾಸಕ ಡಾ.ಎಂ. ಚಂದ್ರಪ್ಪ, ವಿಧಾನ ಪರಿಷತ್ ಸದಸ್ಯರಾದ ಚಿದಾನಂದ ಎಂ ಗೌಡ, ಕೆ.ಎಸ್.ನವೀನ್, ಡಿ.ಟಿ.ಶ್ರೀನಿವಾಸ್, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಅಧ್ಯಕ್ಷ ಕೆ.ಅನ್ವರ್ ಭಾಷಾ ಭಾಗವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಕರ್ನಾಟಕ ದ್ರಾಕ್ಷಾರಸ ಮಂಡಳಿ ಅಧ್ಯಕ್ಷ ಡಾ.ಬಿ.ಯೋಗೇಶ್ ಬಾಬು, ಆದಿಜಾಂಬವ ನಿಗಮದ ಅಧ್ಯಕ್ಷ ಜಿ.ಎಸ್. ಮಂಜುನಾಥ್, ಸಫಾಯಿ ಕರ್ಮಚಾರಿ ಆಯೋಗದ ಅಧ್ಯಕ್ಷೆ ಸವಿತಾ ರಘು, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ತಾಜ್‌ಪೀರ್, ನಗರಸಭೆ ಅಧ್ಯಕ್ಷೆ ಸುಮಿತಾ ಬಿ.ಎನ್ ರಾಘವೇಂದ್ರ, ವೀರಶೈವ ಸಮಾಜದ ಅಧ್ಯಕ್ಷ ಹೆಚ್. ಎನ್.ತಿಪ್ಪೇಸ್ವಾಮಿ, ಕಾರ್ಯದರ್ಶಿ ಪಿ.ವೀರೇಂದ್ರ ಕುಮಾರ್, ಲಿಂಗಾಯತ ಪಂಚಮಸಾಲಿ ಸಮಾಜದ ಅಧ್ಯಕ್ಷ ಕೆ.ಸಿ. ಗಂಗಾಧರಪ್ಪ, ಕಾರ್ಯದರ್ಶಿ ಎಸ್.ತಿಪ್ಪೇಸ್ವಾಮಿ ಸೇರಿದಂತೆ ಜಿಲ್ಲೆಯ ಸಮಸ್ತ ಗೌರವಾನ್ವಿತ ಜನಪ್ರತಿನಿಧಿಗಳು ಭಾಗವಹಿಸುವರು.

### ರಸಗೊಬ್ಬರ ಘಟಕಕ್ಕೆ ಸಹಾಯಧನಕ್ಕಾಗಿ ಅರ್ಜಿ ಆಹ್ವಾನ

» **ದಾವಣಗೆರೆ**

ಪ್ರಸಕ್ತ ಸಾಲಿನ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ತೋಟಗಾರಿಕೆ ಇಲಾಖೆಯಿಂದ ನೀರಿನಲ್ಲಿ ಕರಗುವ ರಸಗೊಬ್ಬರ ಘಟಕಕ್ಕೆ ಸಹಾಯಧನ ನೀಡಲು ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ ಹಾಗೂ ಸಾಮಾನ್ಯ ವರ್ಗದ ರೈತರಿಂದ ಅರ್ಜಿ ಆಹ್ವಾನಿಸಲಾಗಿದೆ. ನೀರಿನಲ್ಲಿ ಕರಗುವ ರಸಗೊಬ್ಬರ ಘಟಕದ ಪ್ರತಿ ಹೆಕ್ಟೇರ್‌ಗೆ ವೆಚ್ಚ ರೂ.50000 ಇದ್ದು. ಸಾಮಾನ್ಯ ವರ್ಗದ ರೈತರಿಗೆ ಶೇ.40 ರಂತೆ ರೂ.20000 ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ರೈತರಿಗೆ ಶೇ.50ರಂತೆ ರೂ.25000 ಸಹಾಯಧನವನ್ನು ನೀಡಲಾಗುವುದು. ತೋಟಗಾರಿಕೆ ಬೆಳೆಗಳನ್ನು ಬೆಳೆಯುವ ರೈತರು ಅನುಮೋದಿತ ಕಂಪನಿಯಿಂದ ರಸಗೊಬ್ಬರ ಖರೀದಿಸಿದ ಮೊತ್ತದ ಬಿಲ್ಲುಗಳನ್ನು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿ, ಜಗಳೂರು ಇಲ್ಲಿಗೆ ಅ.30 ರೊಳಗೆ ಸಲ್ಲಿಸಿದ್ದಲ್ಲಿ ನೇರವಾಗಿ ರೈತರ ಖಾತೆಗೆ ಜಮಾ ಮಾಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಪ್ರಸನ್ನ ಕುಮಾರ್.ಜಿ.ಹೆಚ್ ರೈ.ಸಂ.ಕೇಂದ್ರ ಕಸಬಾ ಮತ್ತು ಬಿಳಿಚೋಡು ಮೊ.ಸಂ. 9108338179, ಸುನೀಲ್ ಕುಮಾರ್. ಹೆಚ್.ಟಿ ರೈ.ಸಂ. ಕೇಂದ್ರ ಸೂಕ್ತ ಮೊ.ಸಂ. 7899942287 ಹಾಗೂ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿ, ಜಗಳೂರು ಇಲ್ಲಿ ಸಂಪರ್ಕಿಸಲು ತಿಳಿಸಲಾಗಿದೆ.

### ಧನ್ವಂತರಿ ಜಯಂತಿಯ ದಿನದಂದು ರಾಷ್ಟ್ರೀಯ ಆಯುರ್ವೇದ ದಿನಾಚರಣೆ

» **ದಾವಣಗೆರೆ**

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆಯುಷ್ ಇಲಾಖೆ, ಕರ್ನಾಟಕ ಸರ್ಕಾರಿ ಆಯುಷ್ ವೈದ್ಯಾಧಿಕಾರಿಗಳ ಸಂಘ, ಜಿಲ್ಲಾ ಘಟಕ, ಅಶ್ವಿನಿ ತಪೋವನ ಮತ್ತು ಸುಶ್ರುತ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯಗಳು, ಆಯುಷ್ ಫೆಡರೇಷನ್ ಆಫ್ ಇಂಡಿಯಾ ಮತ್ತು ನ್ಯಾಷನಲ್ ಇಂಟಿಗ್ರೇಟೆಡ್ ಮೆಡಿಕಲ್ ಅಸೋಸಿಯೇಷನ್, ಶ್ರೀ ಧನ್ವಂತರಿ ಆಯುರ್ವೇದ ಔಷಧ ಪ್ರತಿನಿಧಿಗಳ ಸಂಘ ಹಾಗೂ ಆಯುರ್ವೇದ ಔಷಧಿ ವಿತರಕರು, ಮಾರಾಟಗಾರರು ಇವರುಗಳ ಸಂಯುಕ್ತಾಶ್ರಯದಲ್ಲಿ ಅಕ್ಟೋಬರ್ 29 ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಎಂ.ಸಿ.ಸಿ.ಬಿ ಬ್ಲಾಕ್‌ನಲ್ಲಿರುವ ಡಾ.ಸದ್ಯೋಜ್ಯಾತ ಶಿವಚಾರ್ಯ ಸ್ವಾಮಿಗಳ ಮಠದಲ್ಲಿ ಧನ್ವಂತರಿ ಜಯಂತಿಯ ದಿನದಂದು 9ನೇ ರಾಷ್ಟ್ರೀಯ ಆಯುರ್ವೇದ ದಿನಾಚರಣೆಯನ್ನು ಆಯೋಜಿಸಲಾಗಿದೆ. 9ನೇ ರಾಷ್ಟ್ರೀಯ ಆಯುರ್ವೇದ ದಿನಾಚರಣೆಯ ಅಂಗವಾಗಿ ಅಕ್ಟೋಬರ್ 21 ರಿಂದ 25 ರವರೆಗೆ ನಾರೀ ಸ್ವಾಸ್ಥ್ಯ ಹಾಗೂ ಸಬಲೀಕರಣಕ್ಕಾಗಿ ಆಯುರ್ವೇದ ಎಂಬ ಶೀರ್ಷಿಕೆಯಡಿಯಲ್ಲಿ ಹದಿಹರೆಯದ ಹೆಣ್ಣು ಮಕ್ಕಳ ಮತ್ತು ಮಹಿಳೆಯರ, ಪರಿಸರ ರಕ್ಷಣೆ ಹಾಗೂ ಸಸ್ಯ ಮತ್ತು ಪ್ರಾಣಿಗಳ, ಮಾನವನ ಸ್ವಾಸ್ಥ್ಯ ರಕ್ಷಣೆ ಯೋಗಕ್ಷೇಮದಲ್ಲಿ ಆಯುರ್ವೇದ ಪಾತ್ರಗಳ ಬಗ್ಗೆ ಹಾಗೂ ಇನ್ನಿತರ ಕಾರ್ಯಕ್ರಮಗಳನ್ನು ಆಯುಷ್ ಇಲಾಖೆಯಿಂದ ಹಮ್ಮಿಕೊಂಡು ಸಾರ್ವಜನಿಕರಿಗೆ ರಾಷ್ಟ್ರೀಯ ಆಯುರ್ವೇದ ದಿನಾಚರಣೆಯ ಮಹತ್ವ ಹಾಗೂ ಜಾಗತಿಕ ಆರೋಗ್ಯಕ್ಕಾಗಿ ಆಯುರ್ವೇದದ ಆವಿಷ್ಕಾರಗಳು ಕುರಿತು ಜನಸಾಮಾನ್ಯರಲ್ಲಿ ಅರಿವು ಮೂಡಿಸಲಾಗುವುದು.

# 200 ಕೋಟಿ ವೆಚ್ಚದಲ್ಲಿ 100 ಹೊಸ ಠಾಣೆ

## ಪೊಲೀಸರು ಮುಕ್ತವಾಗಿ, ಸ್ವತಂತ್ರವಾಗಿ ಕೆಲಸ ಮಾಡಲು ಸಂಪೂರ್ಣ ಸಹಕಾರ: ಸಿ.ಎಂ.ಸಿದ್ದರಾಮಯ್ಯ

## 2025ರಲ್ಲಿ 10 ಸಾವಿರ ಪೊಲೀಸ್ ವಸತಿ ಮನೆಗಳ ನಿರ್ಮಾಣಕ್ಕೆ 2000 ಕೋಟಿ ನೀಡಿದ್ದೇವೆ: ಸಿ.ಎಂ

» **ಬೆಂಗಳೂರು**

ಪೊಲೀಸರು ಮುಕ್ತವಾಗಿ, ಸ್ವತಂತ್ರವಾಗಿ ಕೆಲಸ ಮಾಡಲು ನಮ್ಮ ಸರ್ಕಾರ ಸಂಪೂರ್ಣ ಸಹಕಾರ ನೀಡಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಪೊಲೀಸ್ ಸಂಸ್ಮರಣಾ ದಿನದಂದು ಹುತಾತ್ಮ ಪೊಲೀಸ್ ಸಿಬ್ಬಂದಿಗೆ ನಮನ ಸಲ್ಲಿಸಿ ಮಾತನಾಡಿದರು.

ಜನರ ಪ್ರಾಣ, ಆಸ್ತಿ ರಕ್ಷಿಸುವ ಪೊಲೀಸ್ ಸಿಬ್ಬಂದಿಯ ಹಿತ ರಕ್ಷಿಸಲು ಸರ್ಕಾರ ಬದ್ಧವಾಗಿದೆ. ಇದಕ್ಕಾಗಿ 2025 ರಲ್ಲಿ 10 ಸಾವಿರ ಪೊಲೀಸ್ ವಸತಿ ಮನೆಗಳ ನಿರ್ಮಾಣಕ್ಕೆ 2000 ಕೋಟಿ ನೀಡಿದ್ದೇವೆ. 200 ಕೋಟಿ ವೆಚ್ಚದಲ್ಲಿ 100 ಹೊಸ ಠಾಣೆಗಳ ನಿರ್ಮಾಣ ಆಗುತ್ತಿವೆ

ಪೊಲೀಸ್ ಮಕ್ಕಳಿಗಾಗಿ 7 ಪ್ರಮುಖ ಸ್ಥಳಗಳಲ್ಲಿ 7 ಪಬ್ಲಿಕ್ ಶಾಲೆಗಳನ್ನು ತೆರೆಯಲಾಗುತ್ತದೆ ಎಂದು ಘೋಷಿಸಿದರು. ಕಳೆದ ಒಂದು ವರ್ಷದಲ್ಲಿ ದೇಶದಲ್ಲಿ 216 ಮಂದಿ, ರಾಜ್ಯದಲ್ಲಿ 12 ಮಂದಿ ಪೊಲೀಸ್ ಸಿಬ್ಬಂದಿ ಮತ್ತು ಅಧಿಕಾರಿಗಳು ಕರ್ತವ್ಯದ ಮೇಲಿದ್ದಾಗಲೇ ಹುತಾತ್ಮರಾಗಿದ್ದಾರೆ. ಇವರ ಆತ್ಮಕ್ಕೆ ನಾನು ಶಾಂತಿ ಕೋರುತ್ತಲೇ ಕುಟುಂಬದವರ ದುಃಖದಲ್ಲಿ ಭಾಗಿ ಆಗುತ್ತೇನೆ. ದೇಶದಲ್ಲಿ, ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವಾಗ, ಜನರ ಪ್ರಾಣ, ಮಾನ ಕಾಪಾಡುವ ಹೊತ್ತಲ್ಲಿ ಇವರೆಲ್ಲಾ ಹುತಾತ್ಮರಾಗಿದ್ದಾರೆ ಎಂದರು.





- ಪೊಲೀಸ್ ಮಕ್ಕಳಿಗಾಗಿ 7 ಪ್ರಮುಖ ಸ್ಥಳಗಳಲ್ಲಿ 7 ಪಬ್ಲಿಕ್ ಶಾಲೆಗಳನ್ನು ತೆರೆಯಲಾಗುತ್ತದೆ: ಸಿ.ಎಂ ಘೋಷಣೆ
- ಕಾನೂನು ಸುವ್ಯವಸ್ಥೆಗೂ ಅಭಿವೃದ್ಧಿಗೂ, ಆರ್ಥಿಕತೆಗೂ, ಜಿಡಿಪಿಗೂ ನೇರ ಸಂಬಂಧ ಇದೆ: ಸಿಎಂ

### ಕಾನೂನು ಸುವ್ಯವಸ್ಥೆಯಿಂದ ಜಿಡಿಪಿ

ಕಾನೂನು ಸುವ್ಯವಸ್ಥೆಗೂ ದೇಶದ ಜನರ ಜಿಡಿಪಿಗೂ ನೇರಾ ನೇರ ಸಂಬಂಧ ಇರುವುದನ್ನು ಮುಖ್ಯಮಂತ್ರಿಗಳು ವಿವರಿಸಿದರು. ಕಾನೂನು ಸುವ್ಯವಸ್ಥೆ ಸಮರ್ಪಕವಾಗಿದ್ದರೆ ಮಾತ್ರ ಬಂಡವಾಳ ಹೂಡಿಕೆ ಹೆಚ್ಚಾಗುತ್ತದೆ. ಹೂಡಿಕೆಯಿಂದ ಉದ್ಯೋಗ ಸೃಷ್ಟಿ ಹೆಚ್ಚಾಗುತ್ತದೆ. ಉದ್ಯೋಗ ಸೃಷ್ಟಿಯಿಂದ ಆರ್ಥಿಕತೆಯ ವೇಗ ಹೆಚ್ಚುತ್ತದೆ. ಆರ್ಥಿಕತೆಗೆ ವೇಗ ಬಂದರೆ ಅಭಿವೃದ್ಧಿ ಹೆಚ್ಚುತ್ತದೆ. ಅಭಿವೃದ್ಧಿ ಹೆಚ್ಚಾದರೆ ಜನರ ಜಿಡಿಪಿ, ತಲಾ ಆದಾಯವೂ ಹೆಚ್ಚುತ್ತದೆ ಎಂದರು.

ದೇಶದಲ್ಲಿ ಆಂತರಿಕ ಭದ್ರತೆ ಕಾಪಾಡುವಲ್ಲಿ, ದೌರ್ಜನ್ಯ, ಅಪರಾಧ, ದುರಂತಗಳನ್ನು ತಡೆಯುವುದರಲ್ಲಿ ಪ್ರಮುಖ ಪಾತ್ರ ವಹಿಸುವುದು ನಮ್ಮ ಪೊಲೀಸ್ ಸಿಬ್ಬಂದಿ. ಹೀಗಾಗಿ ಇವರ ಜವಾಬ್ದಾರಿ ಬಹಳ ದೊಡ್ಡದು ಎಂದರು.

ಅಸಮಾನತೆ ಇರುವ ಸಮಾಜದಲ್ಲಿ ಶೋಷಣೆ, ದೌರ್ಜನ್ಯಗಳೂ ಇರುತ್ತವೆ. ಈ ಶೋಷಿತರ ಸಂವಿಧಾನಬದ್ಧವಾದ ಹಕ್ಕುಗಳನ್ನು ಕಾಪಾಡಲು ಮುಖ್ಯ ಪಾತ್ರ ವಹಿಸುವವರು ನಮ್ಮ ಪೊಲೀಸರು. ಇವರ ಜೊತೆಗೆ ಸರ್ಕಾರ ಇರುತ್ತದೆ ಎಂದರು.

ಅಪರಾಧ ತಡೆಯಲು 6000 ಸಾವಿರ ಸಿಸಿ ಕ್ಯಾಮರಾಗಳು, 260 ಕ್ಕೂ ಹೆಚ್ಚು ಹೆದ್ದಾರಿ ಗಸ್ತು ವಾಹನಗಳು ಕರ್ತವ್ಯ ನಿರ್ವಹಿಸುತ್ತಿವೆ ಎಂದು ಮಾಹಿತಿ ನೀಡಿದರು.

ಗೃಹ ಸಚಿವ ಜಿ.ಪರಮೇಶ್ವರ್, ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಅಪರ ಮುಖ್ಯಕಾರ್ಯದರ್ಶಿ ಅತೀಕ್ ಎಲ್.ಕೆ., ಗೃಹ ಕಾರ್ಯದರ್ಶಿ ಉಮಾಶಂಕರ್ , ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿಗಳಾದ ಗೋವಿಂದರಾಜು, ನಸೀರ್ ಅಹಮದ್, ರಾಜ್ಯ ಪೊಲೀಸ್ ಮಹಾ ನಿರ್ದೇಶಕ ಅಲೋಕ್ ಮೋಹನ್ ಸೇರಿ ಹಲವು ಪ್ರಮುಖರು ಉಪಸ್ಥಿತರಿದ್ದರು.

## ಪಕ್ಷ ಬೇಧವಿಲ್ಲದೆ ಬಡ ರೈತರಿಗೆ ಸಾಗುವಳಿ ಪತ್ರ ವಿತರಣೆ ಮಾಡಿ: ಅಧಿಕಾರಿಗಳಿಗೆ ಶಾಸಕರಾದ ಬಸವರಾಜುವಿ ಶಿವಗಂಗಾ ಸೂಚನೆ

» **ಚನ್ನಗಿರಿ**


ಕಳೆದ ಹಲವು ದಶಕಗಳಿಂದ ಉಳುಮೆ ಮಾಡಿಕೊಂಡು ಬರುತ್ತಿರುವ ಬಡ ರೈತರಿಗೆ ಪಕ್ಷಬೇಧ ಮರೆತು ಶೀಘ್ರದಲ್ಲೇ ಬಗರ್ ಹುಕುಂ ಸಾಗುವಳಿ ಪತ್ರ ವಿತರಣೆ ಮಾಡಬೇಕೆಂದು ಶಾಸಕರಾದ ಬಸವರಾಜು ವಿ ಶಿವಗಂಗಾ ಅಧಿಕಾರಿಗಳಿಗೆ ಸೂಚಿಸಿದರು. ತಾಲ್ಲೂಕು ಕಚೇರಿಯಲ್ಲಿ ನಡೆದ ಕ್ಷೇತ್ರದ ಬಗರ್ ಹುಕುಂ ಸಾಗುವಳಿ ಸಕ್ರಮೀಕರಣ ಸಮಿತಿ ಸಭೆ ಅಧ್ಯಕ್ಷತೆ ವಹಿಸಿ ಅಧಿಕಾರಿಗಳ ಸಭೆ ನಡೆಸಿದ ಶಾಸಕರು ರೈತರೆಂದರೆ ನನಗೆ ಎಲ್ಲಾ ಒಂದೇ ಇಲ್ಲಿ ಯಾವ ಪಕ್ಷ ಜಾತಿ ಧರ್ಮ ಎಂದು ನೋಡದೇ ಅವರಿಗೆ ಸಾಗುವಳಿ ಪತ್ರವನ್ನು ನೀಡಬೇಕೆಂದು ಅಧಿಕಾರಿಗಳಿಗೆ ತಿಳಿಸಿದರು. ಸರ್ಕಾರದ ನಿಯಮದಡಿಯಲ್ಲಿ ಸಾಗುವಳಿ ಪತ್ರಕ್ಕೆ ಅರ್ಜಿ ಸಲ್ಲಿಸಿದ ಎಲ್ಲಾ ರೈತರ ದಾಖಲೆಗಳನ್ನು ಪರಿಶೀಲಿಸಿ ಮುಂದಿನ ಸಭೆಯಲ್ಲಿ ಮಾಹಿತಿ ನೀಡಬೇಕೆಂದು ಸೂಚಿಸಿದರು.

ಒಂದು–ಎರಡು ಎಕರೆ ಭೂಮಿಯನ್ನು ಉಳುಮೆ ಮಾಡಿಕೊಂಡು ರೈತರು ಜೀವನ ನಡೆಸುತ್ತಿದ್ದಾರೆ ಅದೇ ಜಮೀನು ನಂಬಿ ಎಷ್ಟೋ ರೈತರು ಬದುಕು ಸಾಗಿಸುತ್ತಿದ್ದಾರೆ. ಇಂಥ ರೈತರಿಗೆ ಅನ್ಯಾಯವಾಗಲು ನಾನು ಬಿಡುವುದಿಲ್ಲ, ಅಧಿಕಾರಿಗಳು ರೈತರಿಗೆ ಸಾಗುವಳಿ ಪತ್ರ ನೀಡುವಲ್ಲಿ ಪ್ರಾಮಾಣಿಕವಾಗಿ ಕೆಲಸ ಮಾಡಬೇಕೆಂದರು. ನಿದಿತ ಫಾರಂನಲ್ಲಿ ಸಾಗುವಳಿ ಪತ್ರಕ್ಕೆ ಅರ್ಜಿ ಸಲ್ಲಿಸಿದ ಎಲ್ಲಾ ರೈತರಿಗೂ ಹಕ್ಕುಪತ್ರ ನೀಡುವುದು ನಮ್ಮ ಜವಾಬ್ದಾರಿ ಈ ನಿಟ್ಟಿನಲ್ಲಿ ಅಧಿಕಾರಿಗಳು ರೈತರ ಹಿತಕ್ಕಾಗಿ ಕೆಲಸ ಮಾಡಬೇಕೆಂದರು. ಇನ್ನೂ ಅರಣ್ಯ ಇಲಾಖೆ ಅಧಿಕಾರಿಗಳು ವಿನಃ ಕಾರಣ ಬಡ ರೈತರ ಮೇಲೆ ದಬ್ಬಾಳಿಕೆ ನೋಟೀಸ್ ಜಾರಿ ಮಾಡಬಾರದು, ನಿಯಮಾನುಸಾರ ಅರ್ಜಿ ಸಲ್ಲಿಸಿದ ರೈತರಿಗೆ ನ್ಯಾಯಾ ಒದಗಿಸಿಕೊಡಲು ಅರಣ್ಯ ಇಲಾಖೆ ಅಧಿಕಾರಿಗಳು ಸೂಕ್ತ ಸಲಹೆ, ಸಹಕಾರ ಮತ್ತು ಮಾರ್ಗದರ್ಶನ ನೀಡಬೇಕೆಂದು ಶಾಸಕರಾದ ಬಸವರಾಜು ವಿ ಶಿವಗಂಗಾ ತಿಳಿಸಿದರು. ಈ ಕುರಿತಂತೆ ತಹಶೀಲ್ದಾರ್ ಶಂಕರಪ್ಪ ಅವರು ಶಾಸಕರಿಗೆ ಬಗರ್ ಹುಕುಂ ಸಾಗುವಳಿ ಪತ್ರದ ಬಗ್ಗೆ ಮಾಹಿತಿ ನೀಡಿದರು.

ಮುಂದಿನ ಸಭೆಯಲ್ಲಿ ಸಾಗುವಳಿ ಪತ್ರಕ್ಕೆ ಅರ್ಜಿ ಸಲ್ಲಿಸಿದ ಎಲ್ಲಾ ರೈತರ ಕುರಿತು ಸಂಪೂರ್ಣ ಮಾಹಿತಿಯೊಂದಿಗೆ ವರದಿ ಒಪ್ಪಿಸಲಾಗುವುದೆಂದು ಶಾಸಕರಿಗೆ ತಿಳಿಸಿದರು. ಈ ವೇಳೆ ಬಗರ್ ಹುಕುಂ ಸಾಗುವಳಿ ಸಕ್ರಮೀಕರಣ ಸಮಿತಿ ಸದಸ್ಯರು, ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಣಾಧಿಕಾರಿ ಬಿ. ಕೆ ಉತ್ತಮ್, ತಾಲ್ಲೂಕು ಆಡಳಿತದ ಅಧಿಕಾರಿಗಳು, ಅರಣ್ಯ ಇಲಾಖೆ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು.




## ಯತ್ನಾಳ್‌ರನ್ನು ಶಾಸಕ ಸ್ಥಾನದಿಂದ ವಜಾಗೊಳಿಸುವಂತೆ ಮನವಿ




» **ಚಿತ್ರದುರ್ಗ**

ವಕ್ಫ್‌ಬೋರ್ಡ್ ಆಸ್ತಿ ವಿಚಾರವಾಗಿ ವಿಜಯಪುರನಗರ ಕ್ಷೇತ್ರದ ಶಾಸಕ ಬಸವನಗೌಡ ಪಾಟೀಲ್ ಯತ್ನಾಳ್ ಮುಸ್ಲಿಂ ಸಮುದಾಯ ಹಾಗೂ ಸಚಿವ ಜಮೀರ್ ಅಹಮದ್‌ಖಾನ್‌ರವರ ಬಗ್ಗೆ ಹಗುರವಾಗಿ ಮಾತನಾಡಿರುವುದನ್ನು ಖಂಡಿಸಿ ಕರ್ನಾಟಕ ರಾಜ್ಯ ಜಾತ್ಯತೀತ ಬಿ.ಝಡ್.ಜಮೀರ್ ಅಹಮದ್‌ಖಾನ್ ಬ್ರಿಗೇಡ್‌ನಿಂದ ಅಪರ ಜಿಲ್ಲಾಧಿಕಾರಿ ಮೂಲಕ ರಾಜ್ಯಪಾಲರಿಗೆ ಸೋಮವಾರ ಮನವಿ ಸಲ್ಲಿಸಲಾಯಿತು.ಶಾಸಕರಾಗಿ ಆಯ್ಕೆಯಾಗಿರುವ ಬಸವನಗೌಡ ಪಾಟೀಲ್ ಯತ್ನಾಳ್ ಎಲ್ಲಾ ಜಾತಿ ಧರ್ಮದವರನ್ನು ಸಮಾನವಾಗಿ ಕಾಣುವುದಾಗಿ ಸಂವಿಧಾನದಡಿ ಪ್ರಮಾಣ ಮಾಡಿ ನಂತರ ಬಹಿರಂಗ ಭಾಷಣದಲ್ಲಿ ಮಸ್ಲಿಂ ಸಮುದಾಯವನ್ನು ನಿಂದಿಸಿ ಸಚಿವ ಬಿ.ಝಡ್.ಜಮೀರ್ ಅಹಮದ್‌ಖಾನ್‌ರವರಿಗೆ ಏಕವಚನ ಬಳಸಿ ಕೋಮುಗಲಭೆಗೆ ಪ್ರಚೋದನೆ ನೀಡುತ್ತಿರುವುದರಿಂದ ಕೂಡಲೆ ಶಾಸಕ ಸ್ಥಾನದಿಂದ ವಜಾಗೊಳಿಸುವಂತೆ ಒತ್ತಾಯಿಸಲಾಯಿತು.ಕರ್ನಾಟಕ ರಾಜ್ಯ ಜಾತ್ಯತೀತ ಬಿ.ಝಡ್.ಜಮೀರ್ ಅಹಮದ್‌ಖಾನ್ ಬ್ರಿಗೇಡ್ ಜಿಲ್ಲಾಧ್ಯಕ್ಷ ಸಾದತ್, ಮುದಾಸಿರ್‌ನವಾಜ್, ರಾಜೇಶ್, ಮದನಿ, ಎಸ್. ಎನ್.ರವಿಕುಮಾರ್ ಈ ಸಂದರ್ಭದಲ್ಲಿದ್ದರು.

**ಪ್ರಮುಖ ಸುದ್ದಿ**

# ಉಪಚುನಾವಣೆಯಲ್ಲಿ ಕಾಂಗ್ರೆಸ್ ಗೆಲುವು: ಸಿಎಂ ಸಿದ್ದರಾಮಯ್ಯ

» **ಚಳ್ಳಕೆರೆ**


ಉಪಚುನಾವಣೆಯಲ್ಲಿ ಕಾಂಗ್ರೆಸ್ ಗೆಲುವಿನ ಬಗ್ಗೆ ನೂರಕ್ಕೆ ನೂರರಷ್ಟು ವಿಶ್ವಾಸವಿದ್ದು, ಮೂರು ಕ್ಷೇತ್ರಗಳಲ್ಲಿ ಗೆಲುವು ಸಾಧಿಸಲಿದ್ದೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಸೋಮವಾರ ಚಳ್ಳಕೆರೆ ನಗರದಲ್ಲಿ ಮಾಧ್ಯ ಮದವರೊಂದಿಗ ಮಾತನಾಡಿದರು.ಬಿಜೆಪಿ ಶಾಸಕ ಯತ್ನಾಳ್ ಅವರು ಅಹಿಂದ ವರ್ಗದ ಹಣವನ್ನು ಕಾಂಗ್ರೆಸ್ ಲೂಟಿ ಮಾಡಿದೆ ಎಂಬ ಹೇಳಿಕೆಗೆ ಪ್ರತಿಕ್ರಿಯೆ ನೀಡಿ, 1000 ಕೋಟಿ ಬಳಸಿ ಕಾಂಗ್ರೆಸ್ ಸರ್ಕಾರವನ್ನು ಉರುಳಿಸಲಿದೆ ಎಂದು ಯತ್ನಾಳ್ ಅವರು ಹೇಳಿದ್ದರು. ಅವರು ಹೇಳುವ ಸಾವಿರ ಕೋಟಿ ಯಾರ ಹಣ, ಇದು ಕಪ್ಪು ಹಣ ಇರಬಹುದಲ್ಲವೇ. ಬಿಜೆಪಿಯವರು ಲಂಚದಿಂದ ಬರುವ ಈ ಕಪ್ಪು ಹಣ ಬಳಸಿ ಸರ್ಕಾರ ಉರುಳಿಸುತ್ತೇವೆ ಎಂದಿದ್ದಾರೆ ಎಂದು ತಿಳಿಸಿದರು.ಚನ್ನಪಟ್ಟಣ ಕ್ಷೇತ್ರಕ್ಕೆ ಕಾಂಗ್ರೆಸ್ ಪಕ್ಷ ಸಿ.ಪಿ.ಯೋಗೇಶ್ವರ್ ಅವರನ್ನು ಸೆಳೆಯಲು ಪ್ರಯತ್ನಿಸುತ್ತಿದೆ ಎಂದು ಜೆಡಿಎಸ್ ಅವರು ಆರೋಪಿಸುತ್ತಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ಮೊದಲು ಚನ್ನಪಟ್ಟಣ ಕ್ಷೇತ್ರಕ್ಕೆ ಬಿಜೆಪಿ ಜೆಡಿಎಸ್ ನವರು ಅಭ್ಯರ್ಥಿಯನ್ನು ಆಯ್ಕೆ ಮಾಡಲಿ . ಚನ್ನಪಟ್ಟಣ ಕ್ಷೇತ್ರಕ್ಕೆ ಕಾಂಗ್ರೆಸ್ ಅಭ್ಯರ್ಥಿಯನ್ನು ಸಧ್ಯದಲ್ಲಿಯೇ ಆಯ್ಕೆ ಅಂತಿಮ ಗೊಳಿಸಲಾಗುವುದು ಎಂದರು.

ಬೆಂಗಳೂರಿನಲ್ಲಿ ಹೆಚ್ಚಿನ ಮಳೆಯಾಗುತ್ತಿದ್ದು, ಇದಕ್ಕೆ ಸಂಬಂಧಿಸಿದಂತೆ ನಗರದಲ್ಲಿ ಎಲ್ಲ ಮುಂಜಾಗ್ರತಾಕ್ರಮಗಳನ್ನುತೆಗೆದುಕೊಳ್ಳಲಾಗಿದೆ ಎಂದರು.

### ಒಳಮೀಸಲಾತಿ ಜಾರಿ ಕುರಿತು ಸರ್ಕಾರದಿಂದ ಶೀಘ್ರದಲ್ಲೇ ಸಕರಾತ್ಮಕ ನಿರ್ಧಾರ: ಸಿಎಂ

**ಚಳ್ಳಕೆರೆ:** ರಾಜ್ಯದ ಸಮಸ್ತ ಮಾದಿಗ ಸಮುದಾಯದ ಅಭ್ಯುದಯಕ್ಕೆ ಪ್ರೇರಕವಾಗುವ ಒಳಮೀಸಲಾತಿಯನ್ನು ಕೂಡಲೇ ಜಾರಿಗೆ ತೆರಬೇಕೆಂದು ಒತ್ತಾಯಿಸಿ ರಾಜ್ಯದ ಮುಖ್ಯಮಂತ್ರಿ ಎಸ್.ಸಿದ್ದರಾಮಯ್ಯನವರಿಗೆ ಮಾದಿಗ ಸಮುದಾಯದ ವಿವಿಧ ಸಂಘಟನೆಗಳು ನಗರ ಬೈಪಾಸ್ ರಸ್ತೆಯಲ್ಲಿ ಕಾರು ತಡೆದು ಮನವಿ ಸಲ್ಲಿಸಿದರು. ಮಾದಿಗ ಸಮುದಾಯದ ಹಿರಿಯ ಮುಖಂಡ, ನಿವೃತ್ತ ಜಂಟಿ ನಿರ್ದೇಶಕ ಪ್ರೊ.ಸಿ.ಕೆ.ಮಹೇಶ್, ಮಾದಿಗ ಮಹಾಸಭಾದ ಜಿಲ್ಲಾಧ್ಯಕ್ಷ ಎಂ.ಶಿವಮೂರ್ತಿ, ಮಾದಿಗ ದಂಡೋರ ಜಿಲ್ಲಾ ಸಮಿತಿ ಅಧ್ಯಕ್ಷ ದ್ಯಾವರನಹಳ್ಳಿ ತಿಪ್ಪೇಸ್ವಾಮಿ, ಜಿಲ್ಲಾ ಉಪಾಧ್ಯಕ್ಷ ತಿಮ್ಮರಾಜು, ರಾಜ್ಯ ಪ್ರಧಾನ ಕಾರ್ಯದರ್ಶಿ ಎಚ್.ರವಿಚಂದ್ರ, ಎಂ.ಮಲ್ಲಿಕಾರ್ಜುನ್, ಬಿ.ಪಿ.ಪ್ರಕಾಶ್‌ಮೂರ್ತಿ, ಆರ್.ವೀರಭದ್ರಪ್ಪ ಮುಂತಾದವರು ಒಳಮೀಸಲಾತಿ ಜಾರಿಗೆ ತರುವಲ್ಲಿ ರಾಜ್ಯ ಸರ್ಕಾರ ವಿಫಲವಾಗಿದೆ. ಪ್ರಸ್ತುತ ಸರ್ಕಾರ ಮಾದಿಗ ಸಮುದಾಯದ ಒಳಮೀಸಲಾತಿಯನ್ನು ಜಾರಿಗೊಳಿಸಿದಲ್ಲಿ ಮಾತ್ರ ಮುಂದಿನ ಭವಿಷ್ಯದ ದಿನಗಳಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಉಜ್ವಲಭವಿಷ್ಯವಿದೆ. ಸಮುದಾಯ ಸದಾಕಾಲ ಕಾಂಗ್ರೆಸ್ ಪರವಾಗಿ ಕಾರ್ಯನಿರ್ವಹಿಸುತ್ತಿದೆ. ಈ ಹಿನ್ನೆಲೆಯಲ್ಲಿ ಕೂಡಲೇ ಜಾರಿಗೊಳಿಸಬೇಕೆಂದು ಒತ್ತಾಯಿಸಿದರು. ಮನವಿ ಪಡೆದ ನಂತರ ಮುಖ್ಯಮಂತ್ರಿ ಎಸ್.ಸಿದ್ದರಾಮಯ್ಯ ನಮ್ಮ ಸರ್ಕಾರ ಮಾದಿಗ ಒಳಮೀಸಲಾತಿ ವಿರೋಧಿಯಲ್ಲ. ಒಳಮೀಸಲಾತಿಯನ್ನು ಜಾರಿ ಕುರಿತು ಈಗಾಗಲೇ ಚರ್ಚೆ ನಡೆದಿದೆ. ಶೀಘ್ರದಲ್ಲೇ ರಾಜ್ಯದ ಮಾದಿಗ ಸಮುದಾಯದ ಅಭಿವೃದ್ಧಿಗೆ ಒಳಮೀಸಲಾತಿ ಜಾರಿಗೊಳಿಸುವ ಉದ್ದೇಶ ಸರ್ಕಾರದ್ದಾಗಿದೆ ಎಂದರು.



ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ, ಮಾಜಿ ಸಚಿವ ಎಚ್.ಆಂಜನೇಯ, ಶಾಸಕ ಕೆ.ಸಿ.ವೀರೇಂದ್ರ, ಜಿಲ್ಲಾ ಕೆಪಿಸಿಸಿ ಅಧ್ಯಕ್ಷ ಎಂ.ಕೆ.ತಾಜ್‌ಪೀರ್, ಕಂದಿಕೆರೆಸುರೇಶ್‌ಬಾಬು, ಎಂ.ಜೆ.ರಾಘವೇಂದ್ರ ಮುಂತಾದವರು ಉಪಸ್ಥಿತರಿದ್ದರು.

### ಉಪಚುನಾವಣೆಯ 3 ಕ್ಷೇತ್ರದಲ್ಲಿ ಕಾಂಗ್ರಸ್ ಪಕ್ಷದ ಗೆಲುವು: ಡಿಕೆಶಿ

**ಚಳ್ಳಕೆರೆ:** ರಾಜ್ಯದಲ್ಲಿ ಮೂರು ಕ್ಷೇತ್ರಗಳಿಗೆ ಉಪಚುನಾವಣೆ ನಡೆಯಲಿದ್ದು, ಈಗಾಗಲೇ ಎಐಸಿಸಿ ನಿರ್ದೇಶನ ಮೇರೆಗೆ ಸೂಕ್ತ ಅಭ್ಯರ್ಥಿಗಳನ್ನು ಗುರುತಿಸಲಾಗಿದೆ. ಮೂರು ಸ್ಥಾನಗಳಲ್ಲೂ ಗೆಲ್ಲುವ ವಿಶ್ವಾಸವನ್ನು ಗುರಿಯನ್ನು ಪಕ್ಷ ಹೊಂದಿದೆ ಎಂದು ಉಪಮುಖ್ಯಮಂತ್ರಿ, ರಾಜ್ಯಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ವಿಶ್ವಾಸ ವ್ಯಕ್ತಪಡಿಸಿದರು.



ಅವರು, ಶಾಸಕ ರಘುಮೂರ್ತಿಯವರ ಪುತ್ರಿ ವಿವಾಹ ಕಾರ್ಯಕ್ಕೆ ಆಗಮಿಸಿ ವಧುವರರನ್ನು ಆಶೀರ್ವದಿಸಿ ತೆರಳುವ ಮುನ್ನ ಪತ್ರಕರ್ತರೊಂದಿಗೆ ಮಾತನಾಡಿ, ಕೆಲವೊಮ್ಮೆ ರಾಜಕೀಯ ಕ್ಷೇತ್ರದಲ್ಲಿ ಅನಿರೀಕ್ಷಿತ ಬದಲಾವಣೆಯನ್ನು ನಾವು ನಿರೀಕ್ಷೆ ಮಾಡಬಹುದಾಗಿದೆ. ಪ್ರಸ್ತುತ ಬಿಜೆಪಿ ಎಂಎಲ್ಸಿ ಸಿ.ಪಿ.ಯೋಗೇಶ್ವರ್‌ರವರನ್ನು ನಾವು ಎಂದೂ ಭೇಟಿಯಾಗಿಲ್ಲ. ಚುನಾವಣೆ ಸ್ಪರ್ಧೆ ಕುರಿತು ಚರ್ಚೆ ನಡೆಸಿಲ್ಲವೆಂದು ಸ್ಪಷ್ಟಪಡಿಸಿದರು. ಚನ್ನಪಟ್ಟಣ ಉಪಚುನಾವಣೆ ಕುರಿತಂತೆ ನಾವು ನಮ್ಮದೇಯಾದ ಚಿಂತನೆಯಲ್ಲಿದ್ದೇವೆ. ಆದರೆ, ಕೇಂದ್ರ ಸಚಿವರು ಯೋಗೇಶ್ವರ್ ಕಾಂಗ್ರೆಸ್ ಸಂಪರ್ಕದಲ್ಲಿದ್ದಾರೆಂದು ಏನೇನೋ ಹೇಳುತ್ತಿದ್ದಾರೆ. ರಾಜ್ಯದ ಜನತೆ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿಕೂಟದ ಬಗ್ಗೆ ವಿಶ್ವಾಸ ಹೊಂದಿಲ್ಲವೆಂದರು. ಈ ಬಾರಿ ರಾಜ್ಯದಲ್ಲಿ ನಿರೀಕ್ಷೆಗೂ ಮೀರಿ ಉತ್ತಮ ಮಳೆಯಾಗಿದೆ. ಎಲ್ಲೆಡೆ ಕೆರೆಕಟ್ಟೆಗಳು ತುಂಬಿವೆ. ಕಾವೇರಿ ನೀರಿನ ಒಳಹರಿವು ಹೆಚ್ಚಾಗಿ ತಮಿಳುನಾಡಿಗೆ ಸೇರುತ್ತಿದೆ. ಮೇಕೆದಾಟು ಯೋಜನೆ ಜಾರಿಗೊಳಿಸಿದರೆ ಎಲ್ಲಾ ಸಹಾಯವಾಗುತ್ತದೆ. ಆದರೆ, ಕೇಂದ್ರ ಸರ್ಕಾರ ಮಾತ್ರ ಈ ಬಗ್ಗೆ ಮೌನವಹಿಸಿರುವುದು ಸರಿಯಲ್ಲವೆಂದರು. ಬೆಂಗಳೂರು ಮಹಾನಗರದಲ್ಲಿ ಮಳೆಯಿಂದ ಆದ ಅನಾಹುತಗಳ ಬಗ್ಗೆ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿರುವೆ. ಅವಶ್ಯವಿರುವ ಕಡೆ ತುರ್ತು ಕಾಮಗಾರಿ ಕೈಗೊಳ್ಳಲು ಮುಖ್ಯಇಂಜಿನಿಯರ್‌ಗೆ ಸೂಚನೆನೀಡಿರುವೆ.





# ಆದರ್ಶ ಶಿಕ್ಷಕರಾಗಿ ಕುವೆಂಪು

ಬ್ರಿಟಿಷರು ನಮ್ಮನ್ನು ನೂರಾರು ವರ್ಷ ಆಳಿದರಾದರೂ ಅವರ ಕೆಲವು ಆಲೋಚನೆಗಳು ಶ್ಲಾಘನೀಯವಾದವು ಮತ್ತು ನಾವು ಇಂದು ಎಂದೆಂದೂ ನೆನೆಪಿಟ್ಟುಕೊಳ್ಳ ಬೇಕಾದಂತವುಗಳು ಒಂದು ವೇಳೆ ಬ್ರಿಟಿಷರು ನಮ್ಮ ದೇಶಕ್ಕೆ ಬರಲಿಲ್ಲವೆಂದಿದ್ದರೆ ನಾವು ಇನ್ನೂ ಸಹ ಬದಲಾಗುತ್ತಿರಲ್ಲವೇನೋ ಎಂದು ಭಾಸವಾಗುತ್ತದೆ ಕಾರಣ ಬ್ರಿಟಿಷ್‌ರ ಶಿಕ್ಷಣ ನೀತಿಗಳು ವೈಚಾರಿಕ–ವೈಜ್ಞಾನಿಕ ಆಲೋಚನೆಗಳು ನಮ್ಮಲ್ಲಿ ಹೊಸತನ್ನು ಯೋಚಿಸಲು ಅನುವು ಮಾಡಿಕೊಟ್ಟಿರುವುದಲ್ಲದೆ ತಾರತಮ್ಯ, ದೌರ್ಜನ್ಯದ ವಿರುದ್ಧ ಬುಗಿಲೇಳುವ ಮನೋಧರ್ಮವನ್ನು ಕಲಿಸುವುದರ ಜೊತೆಗೆ ಹಲವು ಕಂದಚಾರಗಳನ್ನು ಬೇರು ಸಮೇತ ಕಿತ್ತೆಸೆಯುವ ಕಾರ್ಯಗಳನ್ನು ಕೈಗೊಳ್ಳಲು ಶಿಕ್ಷಣದಿಂದ ಮಾತ್ರ ಸಾಧ್ಯವಾಗುವುದೆಂದು ನಮಗೆ ಮನವರಿಕೆ ಮಾಡಿಕೊಟ್ಟಿದ್ದಾರೆ. ಹೌದು, ಒಂದು ನವ ಸಮಾಜವು ಸಾಮಾಜಿಕವಾಗಿ, ಆರ್ಥಿವಾಗಿ, ಶೈಕ್ಷಣಿಕವಾಗಿ, ನೈತಿಕವಾಗಿ ಸದೃಢದಿಂದ ನಿರ್ಮಾಣವಾಗಬೇಕಾದರೆ ಅದು ಶಿಕ್ಷಣದಿಂದಲೇ ಹೊರತು ಯಾವುದೇ ಅನ್ಯ ಮೂಲಗಳಿಂದ ಸಾಧ್ಯವಾಗುವುದಿಲ್ಲ. ಶಿಕ್ಷಣ ಅರಿವನ್ನು ಮೂಡಿಸುತ್ತದೆ, ಅರಿವು ಒಳ್ಳೇಯದನ್ನೇ ತೋರಿಸುತ್ತದೆ ಹಾಗಾಗಿ ನಮ್ಮ ರಾಷ್ಟ್ರ ಕವಿ ಕುವೆಂಪು ಅವರು ಒಬ್ಬ ಶಿಕ್ಷಕರಾಗಿ ತಮ್ಮ ಬರವಣಿಗೆಯಲ್ಲಿ ಶಿಕ್ಷಣಕ್ಕೆ ಹೆಚ್ಚಿನ ಮಹತ್ವವನ್ನು ನೀಡಿದ್ದು ಸಮ–ಸಮಾಜದ ಕಲ್ಪನೆಯನ್ನು ಶಿಕ್ಷಣದ ಮೂಲಕ ಸಮಾಜಕ್ಕೆ ಕೊಡುಗೆಯಾಗಿ ನೀಡಿದ್ದಾರೆ.

1929ರಲ್ಲಿ ಶ್ರೀ ಕುವೆಂಪು ಅವರು ಎಂ.ಎ. ಪರೀಕ್ಷೆಯಲ್ಲಿ ತೇರ್ಗಡೆಯಾದರು. ಅವರಿಗೆ ಮಹಾರಾಜಾ ಕಾಲೇಜಿನಲ್ಲಿ ಕನ್ನಡ ಪ್ರಾಧ್ಯಪಕರ ಹುದ್ದೆ ದೊರೆಯಿತು. ಹಾಗೆ ಅವರು ನೌಕರಿ ಮಾಡುವಾಗ ಅವರ ಸ್ವತಂತ್ರ ಪ್ರಾಮಾಣಿಕ ಪ್ರವೃತ್ತಿಯನ್ನು ಪರೀಕ್ಷಿಸುವಂಥ ಅನೇಕ ಘಟನೆಗಳು ನಡೆದವು. 1936ರಲ್ಲಿ "ಮೈಸೂರು ಸಂಸ್ಥಾನದ ಬಹು ಪ್ರತಿಷ್ಠಿತ ವ್ಯಕ್ತಿಯೊಬ್ಬರ ಮಗ ಇಂಟರ್ಮೀಡಿಯಟ್ ಪರೀಕ್ಷೆಗೆ ಕುಳಿತಿದ್ದರು. ಕುವೆಂಪು, ಅವರ ಕನ್ನಡ ಪತ್ರಿಕೆಗೆ ಬೆಲೆಕಟ್ಟಿ, ಆ ಉತ್ತರಗಳಿಗೆ ನ್ಯಾಯವಾಗಿ ಸಲ್ಲಬೇಕಾಗಿದ್ದ ಅಂಕಗಳನ್ನು ಕೊಟ್ಟಿದ್ದರು. ಆ ಅಂಕಗಳಿಂದ ವಿದ್ಯಾರ್ಥಿ ಫೇಲಾಗುತ್ತಿದ್ದನೋ ಏನೋ ಕೊಟ್ಟಿದ್ದ ಅಂಕಗಳು ಸಾಲದವೆಂದೂ, ಇನ್ನಷ್ಟು ಕೊಡಬೇಕೆಂದೂ ಮೇಲಿಂದ ಸಲಹಾ ರೂಪದ ನಿರೂಪ ಬಂದಿತು. 'ನಾನು ಮಾತ್ರ ಅರ್ಧ ಅಂಕವನ್ನೂ ಕೊಡಲಾರೆ, ಬೇಕಾದ್ದು ಮಾಡಿಕೊಳ್ಳಿ' ಎಂದು ಹೇಳಿ ಉತ್ತರ ಪತ್ರಿಕೆಯನ್ನು ಮೇಲಧಿಕಾರಿಗೆ ಕಳಿಸಿಕೊಟ್ಟರು" ಇದು ಕುವೆಂಪು ಅವರ ವೃತ್ತಿ ಬದ್ಧತೆಯನ್ನು ತೊರಿಸುತ್ತದೆ.

ಶಿಕ್ಷಣ ವ್ಯವಸ್ಥೆಯಲ್ಲಿ ಇಂತಹ ನಿಲುವುಗಳನ್ನು ಪಠ್ಯಕ್ರಮದಲ್ಲಿ ಅಳವಡಿಕೊಂಡರೆ ಬೋಧಿಸುವ ಶಿಕ್ಷಕರು ಮತ್ತು ವಿದ್ಯಾರ್ಥಿಗಳಲ್ಲಿ ಪ್ರಾಮಾಣಿಕತೆ ಗುಣವನ್ನು ಬೆಳೆಸಿದಂತಾಗುತ್ತದೆ. ಯಾವುದೇ ಕೆಲಸ ಮಾಡಿದರು ಅದರಲ್ಲಿ ತೃಪ್ತಿ, ದಕ್ಷತೆ ಮತ್ತು ಪರಿಪೂರ್ಣತೆಯನ್ನು ಹೊಂದಿರಬೇಕಾದರೆ ಆ ಕೆಲಸ ಮತ್ತು ವ್ಯಕ್ತಿಯಲ್ಲಿ ಬದ್ಧತೆ ಇರಬೇಕಾಗುತ್ತದೆ ಎಂದು ಕುವೆಂಪು ಅಭಿಪ್ರಾಯಪಟ್ಟಿದ್ದಾರೆ.

ನುಡಿದಂತೆ ನಡೆಯಬೇಕಾದ ಅಧ್ಯಾಪಕರು: ತಾವು ಒಬ್ಬ ಪ್ರಾಧ್ಯಾಪಕರಾಗಿ ಮೈಸೂರು ವಿಶ್ವವಿದ್ಯಾಲಯದ ಕುಲಪತಿಗಳಾಗಿ ಸೇವೆ ಸಲ್ಲಿಸಿ ವಿದ್ಯಾರ್ಥಿಗಳಿಗೆ ಬದುಕಿನ ಪಾಠವನ್ನು ಕಲಿಸಿಕೊಟ್ಟಂತವರು. ಅವರ ನಿಲುವಿನಲ್ಲಿ ಯಾವ ಸಂಸ್ಥೆಗಳು ಮತ್ತು ಅಧ್ಯಾಪಕರು ವಿದ್ಯಾರ್ಥಿಗಳ ಮನೋಭಾವವನ್ನು ಮೂಢನಂಬಿಕೆಗಳಿಂದ ಮತ್ತು ಮೌಢ್ಯಗಳಿಂದ ದೂರವಿಡಬೇಕೋ ಅಂತಹ ಅಧ್ಯಾಪಕರೇ ವೈಜ್ಞಾನಿಕದೃಷ್ಟಿ ಮತ್ತು ವಿಶಾಲ ಮನೋಭಾವದಿಂದ ದೂರ ಸರಿದುಒಬ್ಬ ವಿಜ್ಞಾನ ಕಲಿಸಿ ಕೊಡುವ ಅಧ್ಯಾಪಕನೇ ತನ್ನ ಸ್ವಂತ ಬದುಕಿನಲ್ಲಿ ರಾಹುಕಾಲ, ಪಂಚಾಂಗ ವಾರ ಭವಿಷ್ಯ ಇತ್ಯಾದಿ ಮೂಢನಂಬಿಕೆಗಳಿಗೆ ಮಾರು ಹೊತ್ತು ಮತ ಮೂರ್ಖನಾಗಿದ್ದರೆ ವಿದ್ಯಾರ್ಥಿಗಳಿಗೆ ಹೇಗೆ ತಾನೆ ಸಿದ್ಧಿಸೀತು ವಿಚಾರದೃಷ್ಟಿ ಎಂದು ಬೇಸರ ಹೇಳಿಕೊಳ್ಳುತ್ತಾರೆ. ಶಿಕ್ಷಕರು ವಿದ್ಯಾರ್ಥಿಗಳನ್ನು ತಿದ್ದುವ ಕೆಲಸವನ್ನು ಮಾಡಬೇಕೇ ಹೊರೆತು ತಾವೇ ತಮ್ಮ ನಡುವಳಿಕೆಗಳಿಂದ ವಿದ್ಯಾರ್ಥಿಗಳನ್ನು ತಪ್ಪು ದಾರಿಗೆ ಎಳೆಯಬಾರದು ಏಕೆಂದರೆ ಶಿಕ್ಷಕರ ವ್ಯಕ್ತಿತ್ವವು ವಿದ್ಯಾರ್ಥಿಗಳಮೇಲೆನೇರವಾಗಿಪರಿಣಾಮಬೀರುತ್ತದೆ. ಎಷ್ಟೋ ವಿದ್ಯಾರ್ಥಿಗಳು ತಮ್ಮ ಶಿಕ್ಷಕರಂತೆಯೇ ವರ್ತನೆ ಮಾಡುವುದು ಅವರನ್ನೇ ಅನುಕರಿಸುವ ಮನಸ್ಥಿತಿಯನ್ನು ಉಳ್ಳವರಾಗಿದ್ದು ವಿದ್ಯಾರ್ಥಿಗಳ ಜೀವನಕ್ಕೆ ತಮ್ಮ ಶಿಕ್ಷಕರನ್ನೇ ಆದರ್ಶ ವ್ಯಕ್ತಿಗಳನ್ನಾಗಿ ಮಾಡಿಕೊಂಡು ಅವರನ್ನೇ ಪರಿಪಾಲಿಸಬೇಕು ಎಂಬ ನಿಲುವಿಗೂ ಬಂದಿರುತ್ತಾರೆ.

ಇಂದಿನ ವಿದ್ಯಾರ್ಥಿಗಳೇ ಮುಂದಿನ ಪ್ರಜೆಗಳು ಎಂಬಂತೆ ಪ್ರಜಸತ್ತಾತ್ಮಕ ಧೋರಣೆಯನ್ನು ಅಧ್ಯಾಪಕರು ತಮ್ಮ ಬೋಧನೆಯಲ್ಲಿ ಬೋಧಿಸಿ ಪ್ರಚೋದಿಸಿ, ವಿದ್ಯಾರ್ಥಿಗಳ ತಪ್ಪು ಗ್ರಹಿಕೆಗಳಿಗೆ ಸಮಂಜಸವಾದ ಉತ್ತರಗಳನ್ನು ನೀಡಿ ಸರಿದಾರಿಗೆ ಕರೆದ್ಯೊಯ ಬೇಕಾಗುತ್ತದೆ. ನಮ್ಮದೇಶದಲ್ಲಿ ಹಲವು ಕಟ್ಟು ಪಾಡುಗಳಿವೆ ಅದರಿಂದ ಮುಕ್ತವಾಗುವುದು ಸುಲಭವಲ್ಲಆದರೂ ಶಾಲೆಯಲ್ಲೇ ಹೆಚ್ಚಿನ ಸಮಯವನ್ನು ಕಳೆಯುವ ವಿದ್ಯಾರ್ಥಿಗಳಿಗೆ ಶಾಲೆಯು ವಿಶಾಲ ವಿಚಾರಧಾರೆ ಮತ್ತು ವಿವೇಚನೆಯನ್ನು



ನೀಡಬಹುದಾಗಿದೆ. ಶಿಕ್ಷಣದಿಂದಲೇ ಮಾತ್ರ ವಿದ್ಯಾರ್ಥಿಗಳಲ್ಲಿ ಒಳ್ಳೆಯ ಆಲೋಚನೆ, ಅಭಿಪ್ರಾಯ, ಸ್ವಾವಲಂಬನೆಯ ಬದುಕು, ಆಸಕ್ತಿ, ಮೌಲ್ಯಗಳನ್ನು ಬೆಳೆಸಲು ಸಾಧ್ಯವಾಗುತ್ತದೆ, ಹಾಗಾಗಿ ಮೊದಲು ಬೋಧಿಸುವ ಅಧ್ಯಾಪಕರುಗಳು ತಮ್ಮ ನಿಲುವನ್ನು ಬದಲಿಸಿಕೊಂಡು ನಂತರದಲ್ಲಿ ಅಂತಹ ವಿಚಾರ ಧಾರೆಗಳನ್ನು ವಿದ್ಯಾರ್ಥಿಗಳಿಗಳಿಗೆ ಬೋಧಿಸಿ ಅಳವಡಿಸಿಕೊಳ್ಳುವಂತೆ ಮಾಡಲು ಸಾಧ್ಯವಾಗಬೇಕಿದೆ. ಇದಕ್ಕೆ ಉದಾಹರಣೆಯೆಂಬಂತೆ 'ಬೆರಳ್‌ಗೆ ಕೊರಳ್' ಎಂಬ ಕುವೆಂಪು ಅವರ ನಾಟಕದಲ್ಲಿ ದ್ರೋಣಾಚಾರ್ಯರು ಮತ್ತು ಏಕಲವ್ಯನ ಗುರು ಶಿಷ್ಯನ ಸಂಬಂಧವನ್ನು ವರ್ಣಿಸಿದ್ದಾರೆ.

ಬೋಧನೆಯು ಒಂದು ಕಲೆಯಾಗಿದೆ: ಸಾಹಿತ್ಯರಚನೆ ಹೇಗೆ ಅವರದೇಎಂಬಂತೆ ವಿಶಿಷ್ಟವೋ ಬೋಧನ ಕ್ರಮವೂ ಅವರದೇ ವಿಶಿಷ್ಟ. ಅಕ್ಷರಅಕ್ಷರ ಓದಿ ಹೇಳುವ ಪಾಠವಲ್ಲ ಅವರದು. ಅಲ್ಲೊಂದು ಇಲ್ಲೊಂದು ಅಗುಳನ್ನು ಹಿಚಿಕಿ ತೋರಿಸಿ, ಇದು ಮುಗುಳಕ್ಕಿ, ಇದು ಅರೆಬೆಂದುದು, ಚೆನ್ನಾಗಿ ಬೆಂದ ಅನ್ನ ಇರಬೇಕಾದುದು ಹೀಗೆ ಎಂದು ತೋರಿಸುವ ರೀತಿ. ಆದರೆ ಅವಶ್ಯಕವೆನಿಸಿದಲ್ಲಿ ಎಳೆಎಳೆಯಾಗಿ ಬಿಡಿಸಿ, ಬೂದುಗನ್ನಡಿ ಹಿಡಿದು, ದೃಷ್ಟಾಂತಗಳೊಡನೆ ಪರಿಷ್ಕಾರವಾಗಿ ತೋರಿಸಿ ಕೊಡುತ್ತಿದ್ದರು.

ಕುವೆಂಪು ಹೆಚ್ಚು ದೀರ್ಘವಾಗಿ ಮತ್ತು ವಿವರವಾಗಿ ಮಾಡಿದ ಪಾಠವೆಂದರೆ 'ಅಲಂಕಾರಶಾಸ್ತ್ರ' ಅದನ್ನು 'ಅಲಂಕಾಶಾಸ್ತ್ರ'ವೆನ್ನುವುದುಕ್ಕಿಂತ 'ಕಾವ್ಯಮೀಮಾಂಸೆ' ಅಥವಾ 'ಕಾವ್ಯವಿಮರ್ಶೆಯ ಮೂಲತತ್ತ್ವಗಳು' ಎಂದುಕರೆಯಬಹುದು. ಸ್ವಯಂ ಕವಿಯಾಗಿ ಪಾಶ್ಚಾತ್ಯ ಪೌರ್ವಾತ್ಯರ ಕಾವ್ಯ ಮೀಮಾಂಸಾ ತತ್ತ್ವಗಳನ್ನೆಲ್ಲ ಕೂಲಂಕುಷವಾಗಿ ಶೋಧಿಸಿ ಸ್ವಂತ ಅಭಿಪ್ರಾಯಗಳನ್ನು ರೂಪಿಸಿಕೊಂಡಿದ್ದುರಿಂದ ಪಾಠ ಮಾಡುವಾಗ ಸಾಹಿತ್ಯದ ವಿಯತ್ತಳದಲ್ಲಿ ಗರುಡನಂತೆ ಗರಿಗೆದರಿಸವೇಚ್ಛೆಯಾಗಿ ವಿಹರಿಸುತ್ತಿದ್ದರು. ತತ್ತ್ವಗಳನ್ನು ಎಳೆಎಳೆಯಾಗಿ ಪದರ ಪದರವಾಗಿ ಬಿಡಿಸಿ ಅರ್ಥಯಿಸುತ್ತಿದ್ದರು. ಅವರದು ಪರಪ್ರೇರಿತ ಆಲೋಚನೆಯಾಗಿರಲಿಲ್ಲ. ಸ್ವತಂತ್ರ ವಿಚಾರಧಾರೆಯಾಗಿದ್ದದರಿಂದ ಅವರ ಪಾಠಹೊಸ ಪ್ರಪಂಚವೊಂದಕ್ಕೆ ಕಣ್ಣುತೆರೆಸಿದಂತೆ ಇತ್ತು.

ಕುವೆಂಪು ಪಾಠವನ್ನು ಕೇಳುತ್ತಿದ್ದರೆ ವೇಳೆ ಕಳೆದದ್ದೇ ಅರಿವಾಗುತ್ತಿರಲಿಲ್ಲ. ವಿಷಯದ ಆಳಕದಕೆ ಅವರು ಇಳಿದಂತೆಲ್ಲ ವಿದ್ಯಾರ್ಥಿಗಳನ್ನೂ ಜೊತೆಯಲ್ಲೇ ಕರೆದೊಯ್ದು ವಿಷಯವನ್ನು ಪದರ ಪದರವಾಗಿ ಬಿಡಿಸಿ, ಅನುಭವಗಮ್ಯವಾದ ನಿತ್ಯಜೀವನದ ನಿದರ್ಶನಗಳಿಂದಲೂ ಸಾಮತಿಗಳಿಂದಲೂ ಕತೆಗಳಿಂದಲೂ ವಿಷಯವನ್ನು ಹೃದಯಂಗಮವಾಗಿಸುತ್ತಿದ್ದರು. ಕೆಲವೊಮ್ಮೆ ಕಪ್ಪು ಹಲಗೆಯ ಮೇಲೆ ಚಿತ್ರಗಳನ್ನು ಬರೆದು ವಿಷಯವನ್ನು ಸ್ಪಷ್ಟಪಡಿಸಿದ್ದೂ ಉಂಟು. ಕುವೆಂಪು ಅವರು ಏನನ್ನೇ ಪಾಠಮಾಡುತ್ತಿರಲಿ, ಯಾವಾಗ ಪಾಠ ಮಾಡುತ್ತಿರಲಿ, ಎಲ್ಲೇ ಪಾಠಮಾಡುತ್ತಿರಲಿ ಪ್ರಾಸಂಗಿಕವಾಗಿ ಅವಿರತವಾಗಿ ನುಡಿಮುತ್ತುಗಳು ಹೊರಬೀಳುತ್ತಿದ್ದುವು.

ಅಂತರ್ ಶಿಸ್ತಿಯ ಬೋಧನಾಕ್ರಮ: ಕುವೆಂಪು ಕನ್ನಡ ಸಾಹಿತ್ಯದ ಮೇರು ರಾಷ್ಟ್ರಕವಿ, ಇವರು ಸಾಹಿತ್ಯದ ಹಲವು ರೂಪಗಳಲ್ಲಿ ತಮ್ಮ ಅನುಭವಗಳನ್ನು, ಚಿಂತನೆಗಳನ್ನು, ಸಂದೇಶಗಳನ್ನು ಅಭಿವ್ಯಕ್ತಪಡಿಸಿದ್ದಾರೆ. ಅದರಂತೆಯೇ ಕುವೆಂಪು ಅವರಿಗೆ ವಿಜ್ಞಾನ ವಿಷಯದಲ್ಲಿ ಹೆಚ್ಚಿನ ಆಸಕ್ತಿ ಇತ್ತು ಅಂದರೇ ಒಬ್ಬ ಅಧ್ಯಾಪಕ ಯಾವುದೇ ಕಾರಣಕ್ಕೂ ತನ್ನ ವಿಷಯದಲ್ಲಿ ಮಾತ್ರ ಪರಿಣತಿಯನ್ನು ಹೊಂದದೆ, ಅವರವರ ಆಸಕ್ತಿಗನುಗುಣವಾಗಿ ಬೇರೆ ವಿಷಯಗಳಲ್ಲೂ ಸಹ ಪರಿಣತಿಯನ್ನು ಹೊಂದಬೇಕು ಎಂಬ ನಿಲುವು ಹೊಂದಿದ್ದರು. ನಮ್ಮ ವಿಚಾರಧಾರೆ ಹಾಗೂ ಆಲೋಚನೆಗಳನ್ನು ಒಂದು ನಿರ್ದಿಷ್ಟತೆಗೆ ಸೀಮಿತಗೊಳಿಸದೆ ವಿಶಾಲವಾದ ರೀತಿಯಲ್ಲಿ ಯೋಚಿಸಿದರೆ ತರಗತಿಗಳಲ್ಲಿ ವಿದ್ಯಾರ್ಥಿಗಳ ಗಮನ ಸೆಳೆಯಲು ಸಾಧ್ಯವಾಗುತ್ತದೆ ಹಾಗೂ ಅಧ್ಯಾಪಕರ ಜ್ಞಾನದ ಮಟ್ಟವೂ ಉತ್ತಮ ರೀತಿಯಲ್ಲಿ ಬೆಳವಣಿಗೆಯಾಗುತ್ತದೆ ಎಂದು ಅರ್ಥಮಾಡಿಕೊಳ್ಳಬಹುದು. ಅಧ್ಯಾಪಕರುಗಳು ಹೆಚ್ಚಿನ ವಿಷಯಗಳಲ್ಲಿ ಪರಿಣತಿಯನ್ನು ಹೊಂದಿದ್ದರೆ ಯಾವುದೇ ಸಂದರ್ಭದಲ್ಲೂ ಪಾಂಡಿತ್ಯವನ್ನು ಪ್ರದರ್ಶಿಸಬಹುದು ಅಲ್ಲದೆ ವಿದ್ಯಾರ್ಥಿಗಳಿಗೂ ಸಹ ಅಧ್ಯಾಪಕರನ್ನು ಒಬ್ಬ ಮಾದರಿ ಅಧ್ಯಾಪಕರನ್ನಾಗಿ ಅನುಸರಿಸಬಹುದು.

ಬೇರೆಯವರ ವಿಚಾರಗಳಿಗೆ ಗೌರವ: ಕುವೆಂಪು ವಿಶಾಲ ಮನೋಭಾವವಿರುವ ಕಾರಣ ತಮ್ಮ ಕೃತಿ ಮತ್ತು ಚಿಂತನೆಗಳಿಗೆ ಮಾತ್ರ ಸೀಮಿತವಾಗಿರದೆ ಬೇರೆಯವರ ಉತ್ತಮ ಸಂದೇಶವುಳ್ಳ ಸಮಾಜ ಕಳಕಳಿಯಿರುವ ಕೃತಿಗಳನ್ನು ಓದಿ ಪ್ರಶಂಸಿಸಿ ಆ ವಿಚಾರಗಳನ್ನು ಬೇರೆಯವರೊಂದಿಗೆ ಚರ್ಚಿಸುತ್ತಿದ್ದರು. ಅದಕ್ಕೆ ಉದಾಹರಣೆಯಾಗಿ ಪೂರ್ಣಚಂದ್ರ ತೇಜಸ್ವಿಯವರು ಹೇಳುವಂತೆ ತನ್ನ ಅಣ್ಣ (ಕುವೆಂಪು) ಬೇಂದ್ರೆಯವರ 'ಸಾಯೋ ಆಟ' ನಾಟಕವನ್ನು ಅಷ್ಟೂ ಜನ ಮಕ್ಕಳನ್ನೂ ಕೂರಿಸಿಕೊಂಡು ಅಭಿನಯ ಪೂರ್ವಕವಾಗಿ ವಾಚನ ಮಾಡಿದ್ದು ಜ್ಞಾಪಕಕ್ಕೆ ಬರತ್ತದೆಂದು. ಮನುಷ್ಯ ಒಂದು ಉನ್ನತ ಸ್ಥಾನಕ್ಕೇರಿದ ನಂತರದಲ್ಲಿ ಅಹಂಕಾರದಿಂದ ಕಣ್ಣಿಗೆ ಪರದೆ ಬಂದುಯಾರೂ ಕಾಣದೆ ಬೀಗುವುದು ಹಾಗೂ ತನ್ನದೇ ವಿಚಾರ ಧಾರೆಗಳನ್ನು ಒತ್ತಾಯ ಪೂರ್ವಕವಾಗಿ ಬೇರೆಯವರ ಮೇಲೆ ಹೇರುವುದು ಸಹಜವಾಗಿ ಕಂಡುಬರುತ್ತದೆ ಇಂತಹ ಸಂದರ್ಭದಲ್ಲಿ ಕುವೆಂಪು ಅವರ ಸಹಿಷ್ಣತೆಯ ಮನೋಭಾವ, ಸಹಕಾರಗಳ ಚಿಂತನೆಗಳು ಬೇರೆಯವರಿಗೂ ದಾರಿದೀಪವಾಗುತ್ತದೆ.

ಕವಿ–ಶಿಕ್ಷಕ ಕುವೆಂಪು ಅವರು ಸ್ಫೂರ್ತಿಯ ಬೆಳಕಾಗಿ ಮನಸುಗಳನ್ನು ಬೆಳಗಿದ ಮತ್ತು ಆತ್ಮಗಳನ್ನು ಬೆಳೆಸಿದರು ಅವರ ತರಗತಿಗಳು ಭಾಷೆ, ಸಾಹಿತ್ಯ ಮತ್ತು ಜೀವನ ಪಾಠಗಳ ವಸ್ತ್ರಗಳಿಂದ ತುಂಬಿದ್ದವು. ಕನ್ನಡ ಭಾಷೆಯ ಮೇಲಿನ ಅವರ ಉತ್ಸಾಹವು ಮಾತೃಭಾಷೆಯ ಶಿಕ್ಷಣಕ್ಕಾಗಿ ಅವರ ಸಮರ್ಥನೆಗೆ ಉತ್ತೇಜನ ನೀಡಿತು, ಶಿಕ್ಷಣದಲ್ಲಿ ಅದರ ಸರಿಯಾದ ಸ್ಥಾನಕ್ಕೆ ದಾರಿ ಮಾಡಿಕೊಟ್ಟಿತು. ಭಾಷಾ ಗಡಿಗಳನ್ನು ಮೀರಿ, ಅವರು ಸಾಮಾಜಿಕ ನ್ಯಾಯ, ಪರಿಸರ ಪ್ರಜ್ಞೆ ಮತ್ತು ಸಾರ್ವತ್ರಿಕ ಭ್ರಾತೃತ್ವದ ಮೌಲ್ಯಗಳನ್ನು ಹುಟ್ಟುಹಾಕಿದರು, ತಮ್ಮ ವಿದ್ಯಾರ್ಥಿಗಳನ್ನು ಕೇವಲ ವಿದ್ವಾಂಸರನ್ನಾಗಿ ಮಾಡದೆ, ಮಾನವತಾವಾದದ ಚೈತನ್ಯದಿಂದ ತುಂಬಿದ ಸುಸಂಬದ್ಧ ನಾಗರಿಕರಾಗಿ ರೂಪಿಸಿದರು. ಶಿಕ್ಷಕನ ಪ್ರಭಾವವು ತರಗತಿಯ ಗೋಡೆಗಳನ್ನು ಮೀರುತ್ತದೆ ಮತ್ತು ತಲೆಮಾರುಗಳ ಮೂಲಕ ಪ್ರತಿಧ್ವನಿಸುತ್ತದೆ ಎಂದು ಅವರು ಅಳಿಸಲಾಗದ ಗುರುತು ಉಳಿಸಿರುತ್ತಾರೆ.

» **ಲೇಖಕರು:**

» **ಡಾ. ಜಗನ್ನಾಥ ಕೆ. ಡಾಂಗೆ, ಶಿಕ್ಷಣ ಪ್ರಾಧ್ಯಾಪಕರು, ಕುವೆಂಪು ವಿಶ್ವವಿದ್ಯಾಲಯ.**

» **ಡಾ. ಉಷಾ. ಜಿ. ಆರ್. ಪ್ರಾಂಶುಪಾಲರು, ಓಂಕಾರ್‌ಮಲ್ ಶಿಕ್ಷಣ ಮಹಾವಿದ್ಯಾನಿಲಯ, ಮೈಸೂರು.**

» **ಡಾ. ಭವ್ಯ. ಆರ್. ಪೋಸ್ಟ್‌ಡಾಕ್ಟರಲ್, ಸಂಶೋಧನಾರ್ಥಿ, ಕುವೆಂಪು ವಿಶ್ವವಿದ್ಯಾಲಯ.**

## ಬೆಂಚ್ ಪ್ರೆಸ್ ಸ್ಪರ್ಧೆ: ಕರ್ನಾಟಕ ತಂಡ ಪ್ರಥಮ ತರಬೇತುದಾರಗೆ ಅಭಿನಂದನೆ

» **ದಾವಣಗೆರೆ**

ಗೋವಾ ರಾಜ್ಯದ ವಾಸ್ಕೋಡಿಗಾಮದಲ್ಲಿ ಇತ್ತೀಚೆಗೆ ನಡೆದ ರಾಷ್ಟಮಟ್ಟದ ಪುರುಷರ ಹಾಗೂ ಮಹಿಳೆಯರ ಬೆಂಚ್ ಪ್ರೆಸ್ ಸ್ಪರ್ಧೆಯಲ್ಲಿ ಕರ್ನಾಟಕ ತಂಡವು ಪ್ರಥಮ ಸ್ಥಾನ ಪಡೆದಿದೆ.

ದಾವಣಗೆರೆಯ ಪೊಲೀಸ್ ಇಲಾಖೆಯ ಹೆಮ್ಮೆಯ ಕ್ರೀಡಾಪಟು ಏಕಲವ್ಯ ಪ್ರಶಸ್ತಿ ಪುರಸ್ಕೃತರಾದ ಎಚ್. ದಾದಾಪೀರ್ ಇವರು ಕರ್ನಾಟಕ ರಾಜ್ಯ ತಂಡಕ್ಕೆ ತರಬೇತಿದಾರರಾಗಿದ್ದರು.



ಕರ್ನಾಟಕ ತಂಡವು ಪ್ರಥಮ ಸ್ಥಾನ ಪಡೆಯಲು ಶ್ರಮಿಸಿದ ಹೆಚ್.ದಾದಾಪೀರ್ ಅವರನ್ನು ದಾವಣಗೆರೆ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್, ಸಂಸದರಾದ ಡಾ॥ ಪ್ರಭಾ ಮಲ್ಲಿಕಾರ್ಜುನ್, ದಾವಣಗೆರೆ ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಶ್ರೀಮತಿ ಉಮಾ ಪ್ರಶಾಂತ್, ಮೀಸಲು ಪಡೆಯ ಡಿವೈಎಸ್ಪಿ ಪಿ.ಬಿ.ಪ್ರಕಾಶ್, ಗ್ರೂಪ್ ಆಫ್ ಐರನ್ ಗೇಮ್, ನಗರಸಭೆ ವ್ಯಾಯಾಮ ಶಾಲೆ, ಬೀರೇಶ್ವರ ವ್ಯಾಯಾಮಶಾಲೆಗಳಎಲ್ಲಾಹಿರಿಯ ಮತ್ತು ಕಿರಿಯ ಕ್ರೀಡಾಪಟುಗಳು ಅಭಿನಂದಿಸಿದ್ದಾರೆ.

## ನಾರೀ ಸ್ವಾಸ್ಥ್ಯ, ಸಬಲೀಕರಣಕ್ಕಾಗಿ ಆಯುರ್ವೇದ ಸಪ್ತಾಹ ಕಾರ್ಯಕ್ರಮ

» **ದಾವಣಗೆರೆ**

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆಯುಷ್ ಇಲಾಖೆ, ದಾವಣಗೆರೆ ಇವರಗಳ ಸಂಯುಕ್ತಾಶ್ರಯದಲ್ಲಿ ನಾರೀ ಸ್ವಾಸ್ಥ್ಯ ಮತ್ತು ಸಬಲೀಕರಣಕ್ಕಾಗಿ ಆಯುರ್ವೇದ ಸಪ್ತಾಹದ ಅಂಗವಾಗಿ ಅಕ್ಟೋಬರ್ 21 ರಂದು ಹರಿಹರ ತಾಲ್ಲೂಕಿನ ಬನ್ನಿಕೋಡು ಗ್ರಾಮದಲ್ಲಿನ ಕರ್ನಾಟಕ ಪಬ್ಲಿಕ್ ಶಾಲೆಯಲ್ಲಿ ಪದವಿ ಪೂರ್ವ ವಿಭಾಗ ಮತ್ತು ಪ್ರೌಢಶಾಲಾ ವಿಭಾಗದ ವಿದ್ಯಾರ್ಥಿಗಳಿಗೆ ಆರೋಗ್ಯದಲ್ಲಿ ಆಯುರ್ವೇದ ಪಾತ್ರದ ಬಗ್ಗೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಜಿಲ್ಲಾ ಆಯುಷ್ ಅಧಿಕಾರಿಂಗಳಾದ ಡಾ.ಯೋಗೇಂದ್ರಕುಮಾರ್. ಬಿ.ಯು. ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಶಾಲಾ ಮುಖ್ಯೋಪಾಧ್ಯಾಯರಾದ ಕೊಟ್ರೇಶ್.ವಿ.ಬಿ. ಅಧ್ಯಕ್ಷತೆ ವಹಿಸಿದ್ದರು. ಹಿರಿಯ ವೈದ್ಯಾಧಿಕಾರಿ ಡಾ.ಸುರೇಶ್ ಕುಮಾರ್.ಎಂ.ಸಿ. ಮತ್ತು ಉಪಮುಖ್ಯ ವೈದ್ಯಾಧಿಕಾರಿ ಡಾ.ಸುಚಿತ್ರಾ.ಎಸ್.ಎಸ್ ಆಯುರ್ವೇದದ



ಬಗ್ಗೆ ಉಪನ್ಯಾಸ ನೀಡಿದರು. ಕಾರ್ಯಕ್ರಮದಲ್ಲಿ ಪದವಿ ಪೂರ್ವ ಕಾಲೇಜು ಪ್ರಭಾರ ಪ್ರಾಂಶುಪಾಲರು ಶಿವಲಿಂಗಯ್ಯ.ಬಿ.ಎಂ., ಶಿಕ್ಷಕರಾದ ನಾಗರಾಜ್ ಹಾಗೂ ಶಾಲಾ ಬೋಧಕ ವರ್ಗದವರು, ಯೋಗ ತರಬೇತುದಾರರು, ಶಾಲಾ ಕಾಲೇಜಿನ ವಿದ್ಯಾರ್ಥಿಗಳು ಹಾಜರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T